# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –226 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 29–03–2025 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 226 | RNI No: KARKAN/2023/88462 | KA/SK/CTA-874/2024-2026 | Chitradurga | Date: 29-03-2025 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜಾನ್ ಮೈನ್ಸ್ ವತಿಯಿಂದ ನಿರಾಶ್ರಿತರಿಗೆ 500 ಕಿಟ್ ವಿತರಣೆ 2

ಜಗಜೀವನರಾಂ, ಡಾ.ಅಂಬೇಡ್ಕರ್ ಜಯಂತಿ: ಅರ್ಥಪೂರ್ಣ ಆಚರಣೆಗೆ ನಿರ್ಧಾರ 3

ಯುಗಾದಿ ಸಾಹಿತ್ಯ, ನಮ್ಮ ವ್ಯಕ್ತಿತ್ವದ ಗಟ್ಟಿತನ 4



ಸುದ್ದಿ, ಜಾಹಿರಾತಿಗೆ 9686622252


# ಕನ್ನಡ ಸಾಹಿತ್ಯಕ್ಕೆ ಎಂತಹ ಶಕ್ತಿ ಇದೆ ಎಂದು ತೋರಿಸಿಕೊಟ್ಟವರು ವಚನಕಾರರು: ಸ್ವಾಮೀಜಿ

» **ಹೊಳಲ್ಕೆರೆ**

ಕನ್ನಡ ಸಾಹಿತ್ಯಕ್ಕೆ ಎಂತಹ ಶಕ್ತಿ ಇದೆ ಎಂದು ತೋರಿಸಿಕೊಟ್ಟವರು ವಚನಕಾರರು ಎಂದು ಸಾಣೆಹಳ್ಳಿ ಶ್ರೀ ಡಾ.ಪಂಡಿತಾರಾಧ್ಯ ಶಿವಚಾರ್ಯ ಸ್ವಾಮಿ ತಿಳಿಸಿದರು.

ಅವರು ಪಟ್ಟಣದ ಸಂವಿಧಾನ ಸೌಧದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಮ್ಮಿಕೊಂಡ 17ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದರು.

ಸಾಹಿತ್ಯ ಸಮ್ಮೇಳನದ ಮೂಲ ಉದ್ದೇಶ ಕೇವಲ ನುಡಿ ಜಾಣರಾಗುವದಲ್ಲ. ನಡೆ ದೀರರಾಗಬೇಕು. ಸಾಹಿತ್ಯ ಸಮ್ಮೇಳನ ಎಂದರೇ ಸಾಹಿತಿಗಳಿಗೆ ಮಿಸಲಾಗಿರಬೇಕು. ಸಾಹಿತ್ಯದಲ್ಲಿ ಅಭಿರುಚಿ ಇವರುವಂತ ರಾಜಕಾರಣಿಗಳು ಬರಬಹುದು. ನಿಮ್ಮ ಆಹ್ವಾನ ಪತ್ರಿಕೆ ನೋಡಿದರೇ ಮತದಾರರ ಪಟ್ಟಿಯಂತೆ ಇದೆ. ಸಾಹಿತ್ಯಕ್ಕಿಂತ ರಾಜಕೀಯ ಜನರೆ ಹೆಚ್ಚಾಗಿ ಇದ್ದಾರೆ. ರಾಜಕಾರಣಿಗಳು ಬೇಡವೆಂದು ಅಲ್ಲ, ಅವರಿಗೆ ಅವರದೆ ವೇದಿಕೆ ಇದೆ. ಇನ್ನು ಮುಂದಿನ ಸಮ್ಮೇಳನಗಳಲ್ಲಿ ಸಾಹಿತಿಗಳಿಗೆ ಮಿಸಲು ನೀಡಬೇಕೆಂದು ಅಭಿಪ್ರಾಯಪಟ್ಟರು.

ಇವತ್ತು ಕನ್ನಡದ ಎಲ್ಲಾ ಶಾಲೆಗಳು ಮುಚ್ಚುತ್ತಿವೆ. ಪೋಷಕರು, ಶಿಕ್ಷಕರು ತಮ್ಮ ಮಕ್ಕಳನ್ನು ಅಗ್ಲಮಾಧ್ಯಮದ ಶಿಕ್ಷಣ ಕೊಡಿಸಲು ಸ್ಪರ್ಧೆ ನಡೆಸುತ್ತಿದ್ದಾರೆ. ಇಂಗ್ಲಿಷ್ ಕಲಿತ ಮಾತ್ರಕ್ಕೆ ಉದ್ಯೋಗ ಸಿಕ್ಕುವುದಿಲ್ಲ. ಕನ್ನಡ ನಮ್ಮ ಮಾತೃ ಭಾಷೆ. ಅದರಲ್ಲಿ ಸಂಸ್ಕೃತಿ ಸಂಸ್ಕಾರ ಇದೆ. ಸರಕಾರ ಯಾವುದೇ ಕಾರಣಕ್ಕು ಕನ್ನಡದ ಶಾಲೆಗಳನ್ನು ಮುಚ್ಚಬಾರದು, ನೂರು ವರ್ಷದಾಡಿದ ಕನ್ನಡ ಶಾಲೆಗಳಿಗೆ ಅನುದಾನ ನೀಡಿ ಮೋರಾರ್ಜಿ ಶಾಲೆಗಳ ಮಾದರಿಯಲ್ಲಿ ಅಭಿವೃದ್ಧಿಪಡಿಸಬೇಕು.



ಪರಿಶುದ್ಧ ಆಡಳಿತ ನಮ್ಮ ನಾಡಿನಲ್ಲಿ ಬರಬೇಕೆಂದರೇ ಮತದಾರ ಪರಶುದ್ಧರಾಗಬೇಕು. ಮತದಾರ ಶುದ್ಧಿಯಾಗದೆ ನೇತಾರ ಒಳ್ಳೆಯವರು ಬರಲಿ ಎನ್ನುವದು ಕಷ್ಟ ಸಾಧ್ಯ ಎಂದು

**ನವೋದರ್ಯ ಸಂಘಟನೆ 5 ಅಂಶ ಕುರಿತು ಚಿಂತನೆ** : ನವ್ರೋದಯ ಸಂಘಟನೆ ಜತೆ ಪಾದಯಾತ್ರೆ ಕೈಗೊಂಡು ಪರಿಸರ, ಕೃಷಿ, ಆರೋಗ್ಯ, ಶಿಕ್ಷಣ, ರಾಜಕಾರಣ ಕುರಿತು ಶುದ್ಧಕರಿಸಲು ಜಾಗೃತಿ ಮೂಡಿಸಲಾಗುತ್ತಿದೆ. ಕೃಷಿಯಲ್ಲಿ ಬಳಕೆಯಾಗುತ್ತಿರುವ ರಾಸಾಯನಿಕ ದಿಂದ ಆಹಾರ ವಿಷವಾಗಿದೆ. ಪರಿಶುದ್ಧ ಆಹಾರ ಬೇಕೆಂದರೇ ರಾಸಾಯಿನಿಕ ಬಳಕೆ ಮಾಡದೆ ಕೃಷಿ ಮಾಡಬೇಕು. ಅಡಿಕೆ ಬೆಳೆ ಹೆಚ್ಚಾಗಿದೆ. ಅದರ ಜತೆಯಲ್ಲಿ ಬೆರೆ ಬೆಳೆಗಳನ್ನು ಬೆಳೆದು ಗುಣಮಟ್ಟದ ಆರೋಗ್ಯ ಕಾಪಾಡಿಕೊಳ್ಳಬೇಕು. ಇವತ್ತಿನ ಶಿಕ್ಷಣದಲ್ಲಿ ಕಾನ್ವೆಂಟ್ ಸಂಸ್ಕೃತಿ ಬೆಳೆದು ಶಿಕ್ಷಣ ದುಭಾರಿಯಾಗಿದೆ. ಶಿಕ್ಷಣ ಸಂಪೂರ್ಣ ಉಚಿತವಾಗಿ ಸಿಕ್ಕುವ ವ್ಯವಸ್ಥೆ ಬೇಕು. ಸುಸ್ಥಿರ ಸಮಾಜ ನಿರ್ಮಾಣ ಮಾಡುವುದು ಸಮ್ಮೇಳನದ ಉದ್ದೇಶವಾಗಬೇಕು. ಸಮ್ಮೇಳನಗಳು ಯಾಂತ್ರಿಕ ಸಮ್ಮೇಳನವಾಗದೆ, ಮನಸ್ಸಿನಲ್ಲಿ ಹೊಸದೊಂದು ಚೈತನ್ಯವನ್ನು ಹುಟ್ಟುಹಾಕುವಂತಿರಬೇಕೆಂದು ತಿಳಿಸಿದರು.

ಬಾಕ್ಸ್ : ನಿನ್ನೆ ಇಲ್ಲೊಂದು ಕಹಿ ಘಟನೆ ನೆಡೆದಿದೆ. (ಶಿರಹಟ್ಟಿ, ಬಾಳೆಹೊಸೂರ ಭಾವೈಕ್ಯತಾ ಮಹಾಸಂಸ್ಥಾನನ ಪೀಠದ ಫಕೀರ ದಿಂಗಾಲೇಶ್ವರ ಮಹಾಸ್ವಾಮಿ) ಸ್ವಾಮಿಜೀಯನ್ನು ಅಹ್ವಾನಿಸಿ ಅವರಿಗೆ ಸರಿಯಾದ ಗೌರ ಕೊಡದೆ ಅವರು ಅಲ್ಲೆ ಕುಳಿತು, ಅಲ್ಲೆ ಎದ್ದು ಹೊದರು ಎಂದು ತಿಳಿದು ಬೇಸರವಾಗಿತ್ತು. ಯಾರನ್ನು ಸಭೆಗೆ ಆಹ್ವಾನಿಸಿದ್ದರೂ ಅವರನ್ನು ಕರೆದುಕೊಂಡು ಬರುವುದು, ವೇದಿಕೆಯಲ್ಲಿ ಕುರಿಸುವುದು, ಕಾರ್ಯಕರ್ತರ ಜವಾಬ್ದಾರಿ ಎಂದು ತಿಳಿದುಕೊಳ್ಳಬೇಕೆಂದು ಸಲಹೆ ನೀಡಿದರು.

ಸಭೆಯಲ್ಲಿ ಸಮ್ಮೇಳನಾಧ್ಯಕ್ಷ ಪ್ರೋ.ಜಿ.ಪರಮೇಶ್ವರಪ್ಪ, ಕೆ.ಎಸ್.ನವೀನ್, ಡಾ.ಪಿ.ಬಿ.ಮೀರಾಸಾಬಿಹಳ್ಳಿ ಶಿವಣ್ಣ, ಕಾಂಗ್ರೇಸ್ ಪಕ್ಷದ ಅಧ್ಯಕ್ಷ ಹನುಮಂತಪ್ಪ, ಮಾಜಿ ಶಾಸಕ ಪಿ.ರಮೇಶ್, ಜಿ.ಪಂ.ಮಾಜಿ ಸದಸ್ಯ ಡಿ.ಕೆ.ಶಿವಮೂರ್ತಿ, ತಾ.ಪಂ.ಮಾಜಿ ಅಧ್ಯಕ್ಷ ಶರತ್ ಕುಮಾರ್ ಪಾಟೀಲ್, ಸಿದ್ದಲಿಂಗಸ್ವಾಮಿ, ಸಾಸಲುದೇವರಾಜ್, ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ರುದ್ರಪ್ಪ, ಪುರಸಭೆ ಸದಸ್ಯರಾದ ಕೆ.ಸಿ.ರಮೇಶ್, ಡಿ.ಸಿ.ಮೋಹನ್, ಕೆ.ಸಿ.ರಮೇಶ್, ಜಿ.ಎಸ್.ನಾಗರಾಜ್ ರಾವ್, ಜಿಲ್ಲಾ ಅಧ್ಯಕ್ಷ ಶಿವಸ್ವಾಮಿ ಸೇರಿದಂತೆ ಹಲವಾರು ಮುಖಂಡರು ಪಾಲ್ಗೊಂಡಿದ್ದರು.

## 8 ನಿರ್ಣಯ

ಪಟ್ಟಣದ ಸವಿಧಾನ ಸೌಧದ ಆವರಣದಲ್ಲಿ ನಡೆದ 17ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ, ಮುಂಜಾನೆ ಮಾತು–ಕಥೆ, ಆಧಿವೇಶನ, ಕವಿಗೋಷ್ಠಿ–ಕವಿಗಳ ಕಲರವ, ಸಮ್ಮೇಳನಾಧ್ಯಕ್ಷರೊಂದಿಗೆ ಸಂವಾದ, ಬಹಿರಂಗ ಅಧಿವೇಶನ ದೊಂದಿಗೆ ಪ್ರಮುಖ 8 ನಿರ್ಣಯಗಳನ್ನು ಅಂಗಿಕರಿಸಿ ಸಮರೋಪಗೊಳಿಸಲಾಗಿತ್ತು.

**ನಿರ್ಣಯಗಳು** : ಚಿತ್ರದುರ್ಗ ಜಿಲ್ಲೆಯ ಎಲ್ಲಾ ಹೋಬಳಿ ಮಟ್ಟದಲ್ಲೊಂದು ಕನ್ನಡ ಮಾದರಿ ಶಾಲೆ ನಿರ್ಮಾಣಮಾಡಬೇಕು. ಚಿತ್ರದುರ್ಗ ಜಿಲ್ಲೆಯಲ್ಲಿ ಬುಡಕಟ್ಟು ವಿಶ್ವವಿದ್ಯಾನಿಲಯ ಸ್ಥಾಪನೆ ಮಾಡಬೇಕು. ಆಕಾಶವಾಣಿ ಕೇಂದ್ರ ಸ್ಥಗಿತವಾಗುವ ಆದೇಶವನ್ನು ಹಿಂಪಡೆಯಬೇಕು. ಜಿಲ್ಲೆಯಲ್ಲಿ ಕನ್ನಡ ಭವನ ನಿರ್ಮಾಣ ಮಾಡಬೇಕು. ಜಿಲ್ಲೆಯ ಎಲ್ಲಾ ಕೆರೆಗಳಿಗೆ ನೀರು ತುಂಬಿಸುವ ನಿರಾವರಿ ಯೋಜನೆ ಜಾರಿಗೊಳಿಸಬೇಕು. ಶಾಲಾ ಕಾಲೇಜು ಮಟ್ಟದಲ್ಲಿ ಸಾಹಿತ್ಯ ಚಟುವಟಿಕೆ ಹೆಚ್ಚಿಸಲು ಕಾರ್ಯ ತಂತ್ರ ರೂಪಿಸಿ ಅನುದಾನ ಪಡೆಯಬೇಕು. ಕನ್ನಡ ಪುಸ್ತಕಗಳು ಮತ್ತು ಪುಸ್ತಕಾಲಯಗಳ ಅಭಿವೃದ್ಧಿಗೆ ಸರಕಾರದ ಸಹಾಯಧನ ನೀಡಬೇಕು. ಕನ್ನಡ ಸಾಹಿತ್ಯವನ್ನು ಸಂಪರ್ಕ ಜಾಲತಾಣದ ಮೂಲಕ ಪ್ರಚಾರ ಮಾಡಬೇಕೆಂದು ನಿರ್ಣಹಿಸಲಾಗಿತ್ತು.

## ಫಾಸ್ಟ್ ನ್ಯೂಸ್

### ಏ.3 ರಂದು ಹೊಸದುರ್ಗ ಜಾನಪದ ಉತ್ಸವ

» **ಹೊಸದುರ್ಗ**



ದೇಸಿಯ ಸಂಸ್ಕೃತಿಯನ್ನು ಬಿಂಬಿಸಿ, ದೇಸಿ ನೆಲೆಗಳನ್ನು ಗುರುತಿಸುವ ಮೂಲತನವನ್ನು ಉಳಿಸಿ, ಬೆಳೆಸುವ ಸಲುವಾಗಿ, ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಏ.3 ರಂದು ಜಾನಪದ ಉತ್ಸವ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದ್ದು, ಸಮಾರಂಭಕ್ಕೆ ಸಕಲ ರೀತಿಯಲ್ಲೂ ಸಿದ್ಧತೆ ನೆಡೆಯುತ್ತಿದೆ. ಕಾರ್ಯಕ್ರಮದಲ್ಲಿ ಮುಖ್ಯವಾಗಿ ಜಾನಪದ ನೃತ್ಯ, ಜಾನಪದ ವೇಷ ಭೂಷಣಗಳು, ಗ್ರಾಮೀಣ ಸೊಗಡಿನ ಪರಿಕರಗಳ ಪ್ರದರ್ಶನ, ಕೃಷಿ ಪರಿಕರಗಳ ಪ್ರದರ್ಶನ, ಗ್ರಾಮೀಣ ದೈವರಾಧನೆ, ಜಾನಪದ ಶೈಲಿಯ ಅಲಂಕಾರ, ಗ್ರಾಮೀಣ ಜಾನಪದ ಕ್ರೀಡೆಗಳು, ಹಳ್ಳಿಯ ಶೈಲಿಯ ಊಟ/ ಖಾದ್ಯಗಳ ಪ್ರದರ್ಶನ ಮತ್ತು ಎತ್ತಿನಗಾಡಿ ಪ್ರದರ್ಶನ ಇರುತ್ತದೆ. ಈ ಕಾರ್ಯಕ್ರಮವನ್ನು ಶಾಸಕ ಬಿ.ಜಿ.ಗೋವಿಂದಪ್ಪನವರು ಉದ್ಘಾಟಿಸಲಿದ್ದಾರೆ. ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರು, ಸ್ಥಳೀಯ ಮುಖಂಡರು, ಹಳೆಯ ವಿದ್ಯಾರ್ಥಿಗಳು, ಕಾಲೇಜು ಉಪನ್ಯಾಸಕರು, ಸಿಬ್ಬಂದಿಗಳು ಮತ್ತು ಸಾವಿರಾರು ವಿದ್ಯಾರ್ಥಿಗಳು ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಿ. ವಿದ್ಯಾರ್ಥಿಗಳು ವಿಶೇಷವಾಗಿ ಸಾಂಪ್ರದಾಯಿಕ ಉಡುಗೆ ಧರಿಸಿ, ಪಾಲ್ಗೊಳ್ಳಿ ಎಂದು ಕಾಲೇಜು ಪ್ರಾಂಶುಪಾಲ ಡಾ.ಅಶ್ವಥ್ ಯಾದವ್ ಮನವಿ ಮಾಡಿದ್ದಾರೆ.

### ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಆಯ್ಕೆ ಪಟ್ಟಿ ಪ್ರಕಟ

» **ಚಿತ್ರದುರ್ಗ**

ಚಿತ್ರದುರ್ಗ ಹಾಗೂ ಭರಮಸಾಗರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ.

ಮಾರ್ಚ್ 20 ರಂದು ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯು ಅರ್ಜಿಗಳನ್ನು ಪರಿಶೀಲಿಸಿ ಪರಿಷ್ಕೃತ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಬಿಡುಗಡೆಗೆ ಅನುಮೋದಿಸಿದೆ. ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಆಯ್ಕೆ ಪಟ್ಟಿಯನ್ನು ನಗರದ ಜಿಲ್ಲಾ ಕ್ರೀಡಾಂಗಣ ಹತ್ತಿರದ ಬಾಲಭವನದ ಕಚೇರಿಯಲ್ಲಿ ಹಾಗೂ ಭರಮಸಾಗರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಆಯ್ಕೆ ಪಟ್ಟಿಯನ್ನು ನಗರದ ತುರವನೂರು ರಸ್ತೆಯ ಬಸಪ್ಪ ಆಸ್ಪತ್ರೆ ಹತ್ತಿರದ ಕಚೇರಿಯಲ್ಲಿ ಪ್ರಕಟಿಸಲಾಗಿದೆ. ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಇದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ ಏಪ್ರಿಲ್ 5 ಸಂಜೆ 5:30ರ ಒಳಗೆ ಸದರಿ ಕಚೇರಿಗಳಿಗೆ ಸಲ್ಲಿಸಬಹುದು. ನಂತರ ಬಂದ ಆಕ್ಷೇಪಣೆಗಳನ್ನು ಸ್ವೀಕರಿಸುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

### ಬೇಸಿಗೆ ಹೆಚ್ಚಳ, ಕಾಡ್ಗಿಚ್ಚು ಸಂಭವ, 1926 ಸಹಾಯವಾಣಿ

» **ದಾವಣಗೆರೆ**

ದಾವಣಗೆರೆ ಪ್ರಾದೇಶಿಕ ವ್ಯಾಪ್ತಿಯ ಅರಣ್ಯ ಪ್ರದೇಶಗಳಲ್ಲಿ ಕಾಡ್ಗಿಚ್ಚು ಕಂಡುಬಂದರೆ ಕೂಡಲೇ ಅರಣ್ಯ ಸಹಾಯವಾಣಿ 1926 ಸಂಖ್ಯೆಗೆ ಕರೆ ಮಾಡಲು ಕೋರಲಾಗಿದೆ. ಅಜಾಗರೂಕತೆಯಿಂದ ಬೆಂಕಿಕಡ್ಡಿಗಳು, ಬೀಡಿ ಹಾಗೂ ಸಿಗರೇಟ್ ತುಂಡುಗಳು ಅರಣ್ಯ ಬೆಂಕಿಗೆ ಕಾರಣವಾಗಿ, ಪರಿಸರಕ್ಕೆ ಹಾನಿಯುಂಟು ಮಾಡಬಹುದು. ಇದರಿಂದ ನೈಸರ್ಗಿಕವಾದ ಅರಣ್ಯ ಸಂಪತ್ತಿಗೆ ಹಾನಿ ಮಾಡುವುದರೊಂದಿಗೆ ನೆಲೆಸಿರುವ ಪ್ರಾಣಿ–ಪಕ್ಷಿ, ಸಸ್ಯ ಸಂಕುಲಗಳ ನಾಶಕ್ಕೆ ಕಾರಣವಾಗುತ್ತದೆ. ಸಹಾಯವಾಣಿ ಜೊತೆಗೆ ರತ್ನಾಕರ್ ಓಬಣ್ಣವರ–ವಲಯ ಅರಣ್ಯಾಧಿಕಾರಿ ಮೊ.ಸಂ.9986230824, ರಾಮಚಂದ್ರಪ್ಪ– ಉಪ ವಲಯ ಅರಣ್ಯಾಧಿಕಾರಿ, ಹೆಬ್ಬಾಳ್ ಶಾಖೆ ಮೊ.ಸಂ: 9513474666, ಹಸನ್ ಬಾಷಾ– ಉಪವಲಯ ಅರಣ್ಯಾಧಿಕಾರಿ, ಮಲೇಬೆನ್ನೂರು ಶಾಖೆ ಮೊ.ಸಂ: 8971081044, ಖಾಲೀದ್ ಮುಜ್ತಾಬಾ– ಉಪ ವಲಯ ಅರಣ್ಯಾಧಿಕಾರಿ, ಹರಿಹರ ಶಾಖೆ ಮೊ.ಸಂ:8105559874, ದಿನೇಶ್ ಕುಮಾರ್ ಕೆ.– ಉಪ ವಲಯ ಅರಣ್ಯಾಧಿಕಾರಿ, ದಾವಣಗೆರೆ ನಗರ ಶಾಖೆ ಮೊ.ಸಂ: 9535852070.

# ಯುಗಾದಿ: ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ತಾತ್ಕಾಲಿಕ ಮಾರುಕಟ್ಟೆ

» **ಚಿತ್ರದುರ್ಗ**

ಯುಗಾದಿ ಹಬ್ಬಕ್ಕೆ ಬೇಕಾಗಿರುವ ವಸ್ತುಗಳನ್ನು ಮಾರಾಟ ಮಾಡಲು ಹಾಗೂ ಸಾರ್ವಜನಿಕರು ಖರೀದಿಸಲು ಅನುಕೂಲವಾಗುವಂತೆ ಮಾ. 28 ರಿಂದ 31 ರವರೆಗೆ ಚಿತ್ರದುರ್ಗ ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ತಾತ್ಕಾಲಿಕ ಮಾರುಕಟ್ಟೆ ವ್ಯವಸ್ಥೆಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ತಿಳಿಸಿದ್ದಾರೆ.

ಯುಗಾದಿ ಹಬ್ಬದ ಪ್ರಯುಕ್ತ ಹಬ್ಬಕ್ಕೆ ಬೇಕಾಗಿರುವ ವಸ್ತುಗಳನ್ನು ವ್ಯಾಪಾರಸ್ಥರು



ಚಿತ್ರದುರ್ಗ ನಗರದ ಎಂ.ಜಿ. ವೃತ್ತಕ್ಕೆ ಬಂದು ವ್ಯಾಪಾರವನ್ನು ಈ ಹಿಂದಿನಿಂದಲೂ ಮಾಡುತ್ತಾ ಬರುತ್ತಿದ್ದಾರೆ. ಇದರಿಂದಾಗಿ ಎಂ.ಜಿ. ವೃತ್ತ, ಆನೆ ಬಾಗಿಲು ರಸ್ತೆ, ಮೆದೆಹಳ್ಳಿ ರಸ್ತೆ, ಹೊಳಲ್ಕೆರೆ ರಸ್ತೆ ಹಾಗೂ ಬಿ.ಡಿ. ರಸ್ತೆಗಳನ್ನು ಹೆಚ್ಚಿನ ಸಾರ್ವಜನಿಕರು ಸೇರುವುದರಿಂದ ನಗರದಲ್ಲಿ ಸುಗಮ ಸಂಚಾರಕ್ಕೆ ಅಡಚಣೆ ಉಂಟಾಗುತ್ತದೆ. ಅಲ್ಲದೆ ಹೆಚ್ಚಿನ ಜನದಟ್ಟಣೆಯಾಗುವ ಹಿನ್ನೆಲೆಯಲ್ಲಿ ಸರಗಳ್ಳತನಗಳು, ಮೊಬೈಲ್ ಮತ್ತು ಪರ್ಸ್ ಕಳ್ಳತನಗಳು ನಡೆಯುವ ಸಾಧ್ಯತೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಸುರಕ್ಷತೆ ದೃಷ್ಟಿಯಿಂದ ಹಬ್ಬದ ನಿಮಿತ್ತ ಹಬ್ಬಕ್ಕೆ ಬೇಕಾಗುವ ವಸ್ತುಗಳ ಮಾರಾಟಗಾರರಿಗೆ ನಗರದ ಹಳೇ ಮಾಧ್ಯಮಿಕ ಶಾಲಾ ಮೈದಾನದಲ್ಲಿ ತಾತ್ಕಾಲಿಕ ಮಾರುಕಟ್ಟೆ ವ್ಯವಸ್ಥೆಗೊಳಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಕೋರಿಕೆ ಸಲ್ಲಿಸಿರುತ್ತಾರೆ.

ಪುಟ 2

# ಚಳುವಳಿ ನಿರತ ರೈತರ ಮೇಲೆ ಪಂಜಾಬ್ ಸರ್ಕಾರ ದೌರ್ಜನ್ಯ: ಖಂಡನೆ

**ಚಿತ್ರದುರ್ಗ:** ದೆಹಲಿ ಗಡಿಯಲ್ಲಿ ಚಳುವಳಿನಿರತ ರೈತರ ಮೇಲೆ ಪಂಜಾಬ್ ಸರ್ಕಾರ ದೌರ್ಜನ್ಯ ನಡೆಸಿರುವುದನ್ನು ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸಂಯುಕ್ತ ಹೋರಾಟ ಕರ್ನಾಟಕದಿಂದ ಜಿಲ್ಲಾಧಿಕಾರಿ ಮೂಲಕ ಶುಕ್ರವಾರ ರಾಷ್ಟ್ರಪತಿಗೆ ಮನವಿ ಸಲ್ಲಿಸಲಾಯಿತು. ಕೃಷಿ ಕಾಯಿದೆಗಳನ್ನು ಹಿಂದಕ್ಕೆ ಪಡೆಯುವಂತೆ ಒಂದು ವರ್ಷ ಐದು ತಿಂಗಳ ಕಾಲ ದೆಹಲಿಯಲ್ಲಿ ರೈತರು ಮುಷ್ಕರ ನಡೆಸಿದಾಗ ಕಾಯಿದೆಗಳನ್ನು ಹಿಂದಕ್ಕೆ ಪಡೆಯುವುದಾಗಿ ಪ್ರಧಾನಿ ನರೇಂದ್ರಮೋದಿ ಭರವಸೆ ನೀಡಿ ಇದುವರೆವಿಗೂ ಕರಾಳ ಕಾಯಿದೆಗಳನ್ನು ವಾಪಸ್ ಪಡೆದಿಲ್ಲ.

ಪುಟ 2

## ಪ್ರಮುಖ ಸುದ್ದಿ

### ವರ್ಷದಲ್ಲಿ 38.74 ಲಕ್ಷ ಸಂಗ್ರಹ; ನಂತರದ ಸ್ಥಾನದಲ್ಲಿ ಹಾಲುರಾಮೇಶ್ವರಸ್ವಾಮಿ

# ಹೊಸದುರ್ಗಕ್ಕೆ ಶ್ರೀ ಗವಿರಂಗನಾಥನೇ ಸಿರಿವಂತ

» **ಪಿ.ಟಿ.ಸಿದ್ದೇಶ್ ಲಕ್ಕಿಹಳ್ಳಿ**

ಹೊಸದುರ್ಗ: ತಾಲೂಕಿನಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಡುವ 72 ದೇವಾಲಯಗಳಿದ್ದು, ಇವುಗಳಲ್ಲಿ ಶ್ರೀರಾಂಪುರ ಹೋಬಳಿಯ ಗವಿರಂಗಾಪುರದ ಬೆಟ್ಟದ ಮೇಲೆ ನೆಲೆಸಿರುವ ಶ್ರೀ ಗವಿರಂಗನಾಥ ಸ್ವಾಮಿಯೇ ತಾಲೂಕಿನ ಅತ್ಯಂತ ಸಿರಿವಂತ ದೇವರಾಗಿದೆ.




ಪ್ರಸಕ್ತ ವರ್ಷ 2024–25ನೇ ಸಾಲಿನಲ್ಲಿ ಶ್ರೀ ಗವಿರಂಗನಾಥಸ್ವಾಮಿಗೆ ಹುಂಡಿ ಮತ್ತು ಕಾಣಿಕೆಯ ರೂಪದಲ್ಲಿ 38.74 ಲಕ್ಷ ರೂ.ಬಂದಿರುವುದು ಮುಜರಾಯಿ ಇಲಾಖೆಯ ದಾಖಲೆಗಳಿಂದ ತಿಳಿದು ಬಂದಿದೆ. ತಾಲೂಕಿನಲ್ಲಿ ಮುಜರಾಯಿ ಇಲಾಖೆಗೆ ಒಳಪಟ್ಟಿರುವ ಪ್ರವರ್ಗ ಎ.ಬಿ ಮತ್ತು ಸಿ ಅಧಿಸೂಚಿತ ದೇವಾಲಯಗಳಿದ್ದು, ಶ್ರೀ ಗವಿರಂಗನಾಥ ಸ್ವಾಮಿ ದೇವಾಲಯವೂ ಪ್ರವರ್ಗ 'ಎ' ಅಡಿಯಲ್ಲಿ ಬರುತ್ತದೆ.

ಅತ್ಯಧಿಕ ಕಾಣಿಕೆ ಸಂಗ್ರಹದಲ್ಲಿ ಗವಿ ರಂಗನಾಥಸ್ವಾಮಿ ದೇವಾಲಯ ಪ್ರಥಮ ಸ್ಥಾನದಲ್ಲಿದ್ದು, ಎರಡನೇ ಸ್ಥಾನದಲ್ಲಿ ಹಾಲುರಾಮೇಶ್ವರ(7.ಲಕ್ಷರೂ) ದೇವಾಲಯವಿದೆ. ಮೂರನೇ ಸ್ಥಾನದಲ್ಲಿ ಮೈಲಾರಪುರದ ಶ್ರೀ ಮೈಲಾರಲಿಂಗೇಶ್ವರ ಸ್ವಾಮಿ ದೇವಾಲಯವಿದ್ದು, ಇನ್ನುಳಿದಂತೆ ಆದಾಯದಲ್ಲಿ 70 ದೇವಾಲಯಗಳು ಕ್ರಮಾಂಕದಲ್ಲಿ ಬರುತ್ತವೆ.

ನಮ್ಮಜನ ವಿಶೇಷ

ಪುಟ 2



### ವಿಷ್ಣುವಿನ ಕೂರ್ಮಾವತಾರದ ಸ್ವಯಂಸ್ವಾಮಿ

'ಸುರರು ಮತ್ತು ಅಸುರರು ಸಮುದ್ರ ಮಂಥನ ಮಾಡಿದಾಗ ಶ್ರೀ ವಿಷ್ಣು ಕೂರ್ಮವತಾರ ತಾಳುತ್ತಾನೆ. ಅದೇ ಸ್ವಯಂ ಸ್ವಾಮಿ ಬಂದು ಗವಿರಂಗಾಪುರದ ಬೆಟ್ಟದ ಮೇಲೆ ಆಮೆಯ ಅವತಾರದಲ್ಲಿ ನೆಲೆಸಿದ್ದು, ಇದು ವಿಷ್ಣುವಿನ ದಶಾವತಾರಗಳಲ್ಲಿ ಒಂದಾಗಿದೆ. ಕೂರ್ಮಾವತಾರದ ಮೂಲರೂಪದ ಸ್ವಾಮಿಯನ್ನು ಇಲ್ಲಿ ಬಿಟ್ಟರೆ, ಪ್ರಪಂಚದ ಯಾವುದೇ ಮೂಲೆಯಲ್ಲಿಯೂ ಕಾಣಲು ಸಾಧ್ಯವಿಲ್ಲ. ಈ ಕ್ಷೇತ್ರದ ಮಹಿಮೆ ಮತ್ತು ಮಹತ್ವದ ಬಗ್ಗೆ ನಮ್ಮ ಗುರುಗಳು ನಮಗೆ ತಿಳಿಸಿದ್ದಾರೆ' ಎಂದು ಗವಿರಂಗನಾಥಸ್ವಾಮಿ ಕ್ಷೇತ್ರದ ಕುರಿತು ಇತ್ತೀಚೆಗೆ, ಹೆಗ್ಗೆರೆ ಗ್ರಾಮಕ್ಕೆ ಭೇಟಿ ನೀಡಿದ್ದ ಧನಂಜಯ ಅಘೋರಿ ನಾಗಸಾಧು ಹೇಳಿದ್ದರು.

> ಹೊಸದುರ್ಗ ತಾಲೂಕು ರಾಜ್ಯದಲ್ಲಿಯೇ ವಿಶಿಷ್ಟ ಮತ್ತು ವಿಶೇಷವಾಗಿದ್ದು, ನಮ್ಮಲ್ಲಿ ಪುರಾಣ ಪ್ರಸಿದ್ಧ ಮತ್ತು ಇತಿಹಾಸ ಪ್ರಸಿದ್ಧವಾದ ಕ್ಷೇತ್ರಗಳು ಸಾಕಷ್ಟಿವೆ. ವಿಷ್ಣುವಿನ ದಶಾವತಾರಗಳಲ್ಲಿ ಕೂರ್ಮವತಾರವೂ ಒಂದು. ಕೂರ್ಮವತಾರದ ಶ್ರೀ ಗವಿರಂಗನಾಥಸ್ವಾಮಿಯನ್ನು ಗವಿರಂಗಾಪುರದ ಬೆಟ್ಟದ ಮೇಲೆ ಬಿಟ್ಟರೆ, ಇನ್ನೆಲ್ಲಿಯೂ ಕಾಣಲು ಸಾಧ್ಯವಿಲ್ಲ. ಇಂತಹವೊಂದು ಧಾರ್ಮಿಕ ಪುಣ್ಯಕ್ಷೇತ್ರ ಹೊಸದುರ್ಗ ತಾಲೂಕಿನಲ್ಲಿರುವುದು ಹೆಮ್ಮೆಯ ವಿಚಾರ. ಅಲ್ಲದೇ, ತಾಲೂಕಿನಲ್ಲಿಯೇ ಸಿರಿವಂತ ದೇವಾಲಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವುದು ಸಂತಸದ ವಿಚಾರ. ಸ್ವಾಮಿಯ ದರ್ಶನ ಪಡೆಯಲು ರಾಜ್ಯ ಮಾತ್ರವಲ್ಲದೆ, ದೇಶದ ನಾನಾ ಭಾಗಗಳಿಂದ ಅಪಾರ ಸಂಖ್ಯೆಯಲ್ಲಿ ಭಕ್ತ ಸಮೂಹವೇ ಬರುತ್ತದೆ. ಇಲ್ಲಿಗೆ ಬಂದ ಭಕ್ತರಿಗೆ ಯಾವುದೇ ಸಮಸ್ಯೆಯಾಗದಂತೆ ಎಲ್ಲಾ ರೀತಿಯ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಭಕ್ತರೆಲ್ಲರ ಸಹಕಾರದಿಂದಾಗಿ ಕ್ಷೇತ್ರ ಮತ್ತಷ್ಟು ಪ್ರಗತಿಹೊಂದಬೇಕಿದೆ.
>
> » **ಶಂಕರಪ್ಪ ಹೆಗ್ಗೆರೆ ದೇವಾಲಯದ ಭಕ್ತ**

## ಫಾಸ್ಟ್ ನ್ಯೂಸ್

### ಮಾ.30ರಂದು ಶ್ರೀ ಕಾಳಿಕಾದೇವಿ ರಥೋತ್ಸವ

» ದಾವಣಗೆರೆ


ಯುಗಾದಿ ಹಬ್ಬದ ಪ್ರಯುಕ್ತ ಕಾಳಿಕಾದೇವಿ ರಸ್ತೆಯಲ್ಲಿರುವ ಶ್ರೀ ಕಾಳಿಕಾ ದೇವಿ ವಿಶ್ವಕರ್ಮ ದೇವಸ್ಥಾನದಲ್ಲಿ ಮಾ.29ರ ಶನಿವಾರ ಯುಗಾದಿ ಅಮಾವಾಸ್ಯೆ ಪ್ರಯುಕ್ತ ಶ್ರೀ ದೇವಿಗೆ ಬೆಳಿಗ್ಗೆ ಪಂಚಾಮೃತ ಅಭಿಷೇಕ, ಪುಷ್ಪಾಲಂಕಾರ ಮತ್ತು ಗೋಧಿ ಉಡಿ ತುಂಬುವುದು, ನಂತರ ಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. ಮಾ. 30ರ ಭಾನುವಾರ ಯುಗಾದಿ ಪಾಡ್ಯ ದಿನದಂದು ಬೆಳಿಗ್ಗೆ ಪಂಚಾಮೃತ ಅಭಿಷೇಕ, ಪುಷ್ಪಾಲಂಕಾರ, ಮಂಗಳಾರತಿ, ಸಂಜೆ 6-30ಕ್ಕೆ ಶ್ರೀ ಕಾಳಿಕಾದೇವಿ ರಥೋತ್ಸವವನ್ನು ದೇವಸ್ಥಾನದಿಂದ ರಾಜಬೀದಿಗಳಲ್ಲಿ ನೆರವೇರಿಸಲಾಗುವುದು. ನಂತರ ಮಹಾಮಂಗಳಾರತಿ, ಬೇವು-ಬೆಲ್ಲದ ಪ್ರಸಾದವನ್ನು ವಿತರಿಸಲಾಗುವುದು. ರಥೋತ್ಸವ ಕಾರ್ಯಕ್ರಮಕ್ಕೆ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಶ್ರೀ ದೇವಿಯ ಕೃಪೆಗೆ ಪಾತ್ರರಾಗಬೇಕಾಗಿ ಶ್ರೀ ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನ ಆಡಳಿತ ಸಮಿತಿ ಟ್ರಸ್ಟ್ ತಿಳಿಸಿದೆ.

### ಗವಿರಂಗನಾಥನೇ ಸಿರಿವಂತ

» ಮೊದಲ ಪುಟದಿಂದ

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಅಧಿನಿಯಮ 1997ರ ಕಾಯ್ದೆ ಕಾಲಂ 25 ರನ್ವಯ'ಎ' ಮತ್ತು 'ಬಿ' ವರ್ಗದ ಧಾರ್ಮಿಕ ಸಂಸ್ಥೆಗಳಲ್ಲಿ ಸ್ಥಳೀಯರನ್ನೊಳಗೊಂಡಂತೆ ಒಂಬತ್ತು ಸದಸ್ಯರಾಗಿ ವ್ಯವಸ್ಥಾಪನಾ ಸಮಿತಿಗಳಿದ್ದು, ಈ ಸಮಿತಿಗಳು ದೇವಾಲಯದ ವಾರ್ಷಿಕ ಆಯವ್ಯಯ, ಮೂಲಭೂತ ಸೌಕರ್ಯ ಸೇರಿದಂತೆ ಇತರ ವೆಚ್ಚಗಳಿಗಾಗಿ ಹಣವನ್ನು ಬಳಕೆ ಮಾಡಿಕೊಳ್ಳುತ್ತವೆ. ಅದರಂತೆಯೇ, ಶ್ರೀ ಗವಿರಂಗನಾಥಸ್ವಾಮಿ ವ್ಯವಸ್ಥಾಪನಾ ಸಮಿತಿ ರಚನೆಯಾಗಿದ್ದು, ಮುಜರಾಯಿ ಇಲಾಖೆಯ ನಿರ್ದೇಶನದಂತೆ ಕಾರ್ಯನಿರ್ವಹಿಸುತ್ತಿದೆ. ಗವಿರಂಗಸ್ವಾಮಿಗೆ ರಾಜ್ಯ ಮಾತ್ರವಲ್ಲದೇ ಆಂಧ್ರ ಪ್ರದೇಶ, ತಮಿಳುನಾಡು ಮತ್ತು ತೆಲಂಗಾಣ ಸೇರಿದಂತೆ ನಾನಾ ರಾಜ್ಯಗಳ ಅಪಾರಭಕ್ತರ ಸಂಖ್ಯೆಯೇ ಹರಿದು ಬರುತ್ತದೆ. ಭಕ್ತರು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಹರಕೆ, ವಿಶೇಷ ಪೂಜಾಸೇವಾ ಕಾರ್ಯಗಳನ್ನು ನಡೆಸುವುದುಂಟು. ವೈಕುಂಠ ಏಕಾದಶಿ, ದಸರಾ ಹಾಗೂ ಇನ್ನಿತರ ಹಬ್ಬಗಳಲ್ಲಿ ಸ್ವಾಮಿಗೆ ವಿಶೇಷ ಅಲಂಕಾರ, ಪಂಚಾಮೃತ ಅಭಿಷೇಕ ಮತ್ತು ಸೇವಾಕಾರ್ಯಗಳು ನೆರವೇರುತ್ತವೆ. ರಥಸಪ್ತಮಿಯ ದಿನದಂದು ಸ್ವಾಮಿಯ ಅಪ್ಪಣೆಯ ಮೇರೆಗೆ 7 ವರ್ಷ ಅಥವಾ 9 ವರ್ಷಕ್ಕೊಮ್ಮೆ ಜಾತ್ರಾ ಮಹೋತ್ಸವ ನಡೆಯುತ್ತದೆ. ಈ ಕ್ಷೇತ್ರದಲ್ಲಿ ಗವಿರಂಗನಾಥಸ್ವಾಮಿಯ ಜೊತೆಗೆ ಶ್ರೀ ಲಕ್ಷ್ಮಿದೇವಿ, ಕೆಂಚರಾಯ ಮತ್ತು ಕಾಡರಾಯಸ್ವಾಮಿ ನೆಲೆಗೊಂಡಿದ್ದು, ಈ ದೇವಾಲಯಗಳಲ್ಲಿಯೂ ಕೂಡ ನಿತ್ಯವೂ ಪೂಜೆ ಮತ್ತು ಸೇವಾಕಾರ್ಯಗಳು ನಡೆಯುತ್ತಿವೆ' ಎಂದು ಧರ್ಮದರ್ಶಿ ಮೂರ್ತಪ್ಪ ತಿಳಿಸಿದ್ದಾರೆ.

### ಚಳುವಳಿ ನಿರತ ರೈತರ ಮೇಲೆ ಪಂಜಾಬ್ ಸರ್ಕಾರ ದೌರ್ಜನ್ಯ: ಖಂಡನೆ



» ಮೊದಲ ಪುಟದಿಂದ

ರಾಷ್ಟ್ರೀಯ ಹಿತಾಸಕ್ತಿಗಳಿಗೆ ಕಂಟಕವಾಗಿರುವ ಯುಎಸ್. ಸೇರಿದಂತೆ ಇತರೆ ದೇಶಗಳೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಗಳಿಗಾಗಿ ನಡೆಯುತ್ತಿರುವ ಮಾತುಕತೆಗಳನ್ನು ತಕ್ಷಣ ನಿಲ್ಲಿಸಬೇಕು. ರೈತರು ಬೆಳೆಯುವ ಎಲ್ಲಾ ರೀತಿಯ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗಧಿಪಡಿಸಬೇಕು. ರೈತರು ಮತ್ತು ಕಾರ್ಮಿಕರ ಸಾಲಗಳನ್ನು ಮನ್ನಾ ಮಾಡುವುದು ಸೇರಿದಂತೆ ಕೃಷಿ ಮತ್ತು ಗ್ರಾಮೀಣ ವಲಯಗಳಲ್ಲಿ ವಿದ್ಯುತ್ ದರ ಹೆಚ್ಚಳ ಸ್ಮಾರ್ಟ್ ಮೀಟರ್ ಹೇರಿಕೆಯನ್ನು ಹಿಂದಕ್ಕೆ ಪಡೆಯಬೇಕು. ಕೊಳವೆ ಬಾವಿಗಳಿಗೆ ಉಚಿತ ವಿದ್ಯುತ್, ಗೃಹ ಬಳಕೆ ಮತ್ತು ಅಂಗಡಿಗಳಿಗೆ ಮುನ್ನೂರು ಯೂನಿಟ್ ವಿದ್ಯುತ್ ಮಂಜೂರು ಮಾಡುವಂತೆ ಸಂಯುಕ್ತ ಹೋರಾಟ ಕರ್ನಾಟಕ ಒತ್ತಾಯಿಸಿತು. ಕುಮಾರ್ ಸಮತಳ, ರೈತ ಮುಖಂಡ ಬಸ್ತಿಹಳ್ಳಿ ಜಿ.ಸುರೇಶ್‌ಬಾಬು, ಸತ್ಯಪ್ಪ ಮಲ್ಲಾಪುರ, ಕೆ.ಎಂ.ಕಾಂತರಾಜು, ಇನ್ನು ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.

### ತಾತ್ಕಾಲಿಕ ಮಾರುಕಟ್ಟೆ

» ಮೊದಲ ಪುಟದಿಂದ

ಅದರಂತೆ ಸಾರ್ವಜನಿಕರ ಸುಗಮ ಸಂಚಾರ ಹಾಗೂ ಜನದಟ್ಟಣೆ ತಡೆಯುವ ಸಲುವಾಗಿ ಮಾ. 28 ರಿಂದ ಮಾರ್ಚ್ 31 ರವರೆಗೆ ಯುಗಾದಿ ಹಬ್ಬದ ಪ್ರಯುಕ್ತ ಹಬ್ಬಕ್ಕೆ ಬೇಕಾಗುವ ವಸ್ತುಗಳ ಮಾರಾಟಗಾರರಿಗೆ ನಗರದ ಹಳೇ ಮಾಧ್ಯಮಿಕ ಶಾಲಾ ಮೈದಾನದಲ್ಲಿ ನಗರಸಭೆಯ ವತಿಯಿಂದ ತಾತ್ಕಾಲಿಕಮಾರುಕಟ್ಟೆಯವ್ಯವಸ್ಥೆಕಲ್ಪಿಸಲಾಗುತ್ತಿದ್ದು, ಸಾರ್ವಜನಿಕರು ಹಾಗೂ ಮಾರಾಟಗಾರರು ಹಬ್ಬದ ವಸ್ತುಗಳಿಗೆ ಸಂಬಂಧಿಸಿದಂತೆ ಇದೇ ಮೈದಾನದಲ್ಲಿ ತಮ್ಮ ವ್ಯಾಪಾರ ವಹಿವಾಟು ನಿರ್ವಹಿಸುವಂತೆ ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ತಿಳಿಸಿದ್ದಾರೆ.

---

#### ನರೇಗಾದಡಿ ಕೂಲಿಕಾರರಿಗೆ ಉದ್ಯೋಗ ನೀಡಲು ಸೂಚನೆ

# ಆರೋಗ್ಯ ಕೇಂದ್ರಗಳಿಗೆ ಜಿ.ಪಂ ಸಿಇಒ ಭೇಟಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯತಿಗಳಿಗೆ ದಿಢೀರ್ ಭೇಟಿ ನೀಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಅವರು ಜಾಬ್ ಕಾರ್ಡ್ ಹೊಂದಿರುವ ಬಡ ಕುಟುಂಬಗಳಿಗೆ ಬೇಡಿಕೆ ಆಧಾರದಲ್ಲಿ ನರೇಗಾ ಯೋಜನೆಯಡಿ ತಕ್ಷಣ ಉದ್ಯೋಗ ನೀಡಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಚಿತ್ರದುರ್ಗ ತಾಲ್ಲೂಕಿನ ಹುಲ್ಲೂರು ಮತ್ತು ಗೊಡಬನಾಳ್ ಗ್ರಾಮ ಪಂಚಾಯಿತಿಗಳಿಗೆ ಹಾಗೂ ಪಂಡರಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಜಿ.ಪಂ. ಸಿಇಒ ಸೋಮಶೇಖರ್ ಶುಕ್ರವಾರ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಹುಲ್ಲೂರು ಮತ್ತು ಗೊಡಬನಾಳ್ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ, ಗ್ರಾಮ ಪಂಚಾಯತ್ ಜನಪ್ರತಿನಿಧಿಗಳು ಮತ್ತು ಸಾರ್ವಜನಿಕರೊಂದಿಗೆ ಗ್ರಾಮಗಳ ಅಭಿವೃದ್ಧಿ ಬಗ್ಗೆ ಸಂವಾದ ನಡೆಸಿದರು. ಬಹುಮುಖ್ಯವಾಗಿ ಬೇಸಿಗೆ ಇರುವ ಪ್ರಯುಕ್ತ ಕುಡಿಯುವ ನೀರಿನ ಸಮಸ್ಯೆಗಳೇನಾದರೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇದೆಯಾ ಎಂದು ಜಿ.ಪಂ ಸಿಇಒ ಕೇಳಿದಾಗ, ಸಾರ್ವಜನಿಕರು ಪಂಚಾಯಿತಿ ವ್ಯಾಪ್ತಿಯಲ್ಲಿ ಯಾವುದೇ ಕುಡಿಯುವ ನೀರಿನ ಸಮಸ್ಯೆ ಇಲ್ಲ, ಬೇಸಿಗೆ






ಕಾಲ ಪ್ರಾರಂಭವಾಗಿರುವುದರಿಂದ, ಬಡ ಕೂಲಿ ಕಾರ್ಮಿಕರಿಗೆ ಅಗತ್ಯಕ್ಕೆ ಅನುಗುಣವಾಗಿ ಉದ್ಯೋಗ ನೀಡಿ ಎಂದು ತಿಳಿಸಿದರು.

ಮಹಾತ್ಮಾ ಗಾಂಧಿ ನರೇಗಾ ಯೋಜನೆಯ ಬಗ್ಗೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಸಹಾಯಕ ಇಂಜಿನಿಯರ್ ಅವರಿಂದ ಮಾಹಿತಿ ಪಡೆದ ಅವರು, 2025-26ನೇ ಸಾಲಿನಲ್ಲಿ ಜಾಬ್ ಕಾರ್ಡ್ ಹೊಂದಿರುವ ಅರ್ಹ ಬಡ ಕುಟುಂಗಳಿಗೆ ತಕ್ಷಣವೇ ಬೇಡಿಕೆ ಆಧಾರದಲ್ಲಿ ಉದ್ಯೋಗ ನೀಡಿ, ನರೇಗಾ ಮಾರ್ಗಸೂಚಿ ಪ್ರಕಾರ ಕೆಲಸ ನಿರ್ವಹಿಸಲು ಸೂಚಿಸಿದರು. ಗ್ರಾಮಗಳಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಿಕೊಳ್ಳಲು ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು.

ಗ್ರಂಥಾಲಯ, ಅಂಗನವಾಡಿ ಕೇಂದ್ರ, ಕರವಸೂಲಾತಿ ಮತ್ತು 15ನೇ ಹಣಕಾಸಿನ ಬಗ್ಗೆ ಹಾಗೂ ವಸತಿ ಯೋಜನೆಯ ಕುರಿತು ಮಾಹಿತಿ ಪಡೆದರು. ಇ-ಸ್ವತ್ತುಗಳನ್ನು ಸಕಾಲದಲ್ಲಿ ಸಾರ್ವಜನಿಕರಿಗೆ ವಿತರಿಸುವಂತೆ ಸೂಚನೆ ನೀಡಿದರು. ಈ ವೇಳೆ ಸಾರ್ವಜನಿಕರು, ಪರಿಶಿಷ್ಟ ಜಾತಿ ಜನಾಂಗದವರಿಗೆ ರುದ್ರಭೂಮಿ ನೀಡುವಂತೆ ಮನವಿ ಮಾಡಿಕೊಂಡರು. ಕುರುಬರಹಳ್ಳಿ ಗ್ರಾಮದಲ್ಲಿ ಅಂಗನವಾಡಿ ಕೇಂದ್ರ ಪ್ರಸ್ತುತ ಬಾಡಿಗೆಯಲ್ಲಿ ಕಟ್ಟಡದಲ್ಲಿ ನಡೆಸುತ್ತಿದ್ದು, ಸರ್ಕಾರಿ ಜಾಗ ನೀಡುವಂತೆ ಗ್ರಾಮಸ್ಥರು ಕೋರಿದರು.

ನಂತರ ಪಂಡರಹಳ್ಳಿ ಮತ್ತು ಗೊಡಬನಾಳ್ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಪರಿಶೀಲಿಸಿದರು. ಅದರಲ್ಲಿ ಮುಖ್ಯವಾಗಿ ಔಷಧಿಗಳ ದಾಸ್ತಾನು ಕೊಠಡಿಗಳು, ಚುಚ್ಚುಮದ್ದು ನೀಡುವ ಕೊಠಡಿಗಳು, ಪ್ರಯೋಗ ಶಾಲಾ ಕೊಠಡಿಗಳಿಗೆ ಭೇಟಿ ನೀಡಿ ಪರಿಶೀಲಿಸಿ, ಮಾಹಿತಿ ಪಡೆದುಕೊಂಡರು. ವೈದ್ಯಾಧಿಕಾರಿಗಳು, ನರ್ಸ್ ಮತ್ತು ಸಿಬ್ಬಂದಿಗಳೊಂದಿಗೆ ಸಂವಾದ ನಡೆಸಿದರು. ಸ್ವತಃ ಜಿ.ಪಂ. ಸಿಇಓ ಅವರು ಬಿ.ಪಿಯನ್ನು ವೈದ್ಯಾಧಿಕಾರಿಗಳಿಂದಪರಿಶೀಲಿಸಿಕೊಂಡು, ಅಲ್ಲೇ ಇದ್ದ ಹೊರ ರೋಗಿಗಳ ಆರೋಗ್ಯ ವಿಚಾರಿಸಿದರು. ಸರ್ಕಾರಿ ಆಸ್ಪತ್ರೆಗಳಲ್ಲಿ ಎಲ್ಲಾ ಸೌಲಭ್ಯಗಳಿದ್ದು, ಸುತ್ತ-ಮುತ್ತಲಿನ ಗ್ರಾಮಸ್ಥರು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹುಲ್ಲೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪರ್ವೀನ್ ಬಾನು, ಉಪಾಧ್ಯಕ್ಷ ಬಸವರಾಜಪ್ಪ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರವಿಕುಮಾರ್, ಸಹಾಯಕ ನಿರ್ದೇಶಕ (ನರೇಗಾ) ಯರ್ರಿಸ್ವಾಮಿ, ಗ್ರಾಮ ಪಂಚಾಯಿತಿ ಸದಸ್ಯರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರು, ಸಿಬ್ಬಂದಿ ಇದ್ದರು.

---

# ಸಂವಿಧಾನ ಬದಲಾವಣೆ ಡಿಸಿಎಂ ಡಿಕೆಶಿ ವಿರುದ್ಧ ಕ್ರಮಕ್ಕೆ ಜಿಲ್ಲಾ ಜೆಡಿಎಸ್ ಮನವಿ

» ಚಿತ್ರದುರ್ಗ

ನಾವು ಸಂವಿಧಾನ ಬದಲಾವಣೆ ಮಾಡುತ್ತೇವೆ ಎಂದು ಹೇಳಿಕೆ ನೀಡಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಚಿತ್ರದುರ್ಗ ಜಿಲ್ಲಾ ಜನತಾದಳ(ಜಾತ್ಯಾತೀತ)ದ ಜಿಲ್ಲಾ ಪರಿಶಿಷ್ಟ ಜಾತಿ ಘಟಕ ಜಿಲ್ಲಾಡಳಿತದ ಮೂಲಕ ಸರ್ಕಾರದ ಮುಖ್ಯ ಕಾರ್ಯದರ್ಶಿಯವರನ್ನು ಆಗ್ರಹಿಸಿದೆ.

ನವದೆಹಲಿಯಲ್ಲಿ ಇತ್ತೀಚೆಗೆ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್‌ರವರು ಸಂದರ್ಶನವೊಂದರಲ್ಲಿ ನಾವು ಅಧಿಕಾರಕ್ಕೆ ಬಂದರೆ ಸಂವಿಧಾನವನ್ನು ಬದಲಾವಣೆ ಮಾಡಿ ಮತೀಯ ಅಧಾರಿತ ಮೀಸಲಾತಿಯನ್ನು ಜಾರಿಗೆ ತರುತ್ತೇವೆ ಎಂದು ಉದ್ಧಟತನದ ಹೇಳಿಕೆಯನ್ನು ನೀಡಿರುತ್ತಾರೆ ಆದರೆ ಮತೀಯ ಆಧಾರಿತ ಮೀಸಲಾತಿ ಜಾರಿಗೆ ತರಲು ಸಂವಿಧಾನದಲ್ಲಿ ಅವಕಾಶ ಇಲ್ಲ, ಎಂಬುದು ತಿಳಿದಿರುವ ಅಂಶವಾಗಿದೆ. ಆದರೂ ಸಹಾ ಭಾರತ ಸಂವಿಧಾನಕ್ಕೆ ಅಪಮಾನ ಮಾಡುವ ರೀತಿಯಲ್ಲಿ ಬೇಜವಾಬ್ದಾರಿ ಹೇಳಿಕೆ ನೀಡಿದ್ದಾರೆ. ಇಂತಹ ಹೇಳಿಕೆಯನ್ನು ಚಿತ್ರದುರ್ಗ ಜಿಲ್ಲಾ ಜಾತ್ಯಾತೀತ ಜನತಾದಳದ ಎಸ್.ಸಿ.ಘಟಕ ಸಹಿಸುವುದಿಲ್ಲ,



ಇದರ ವಿರುದ್ಧ ರಾಜ್ಯಾದ್ಯಂತ ಹೋರಾಟವನ್ನು ಮಾಡಲಾಗುವುದು. ಈ ಕೂಡಲೇ ಸಂವಿಧಾನ ವಿರೋಧಿ ಡಿ.ಕೆ.ಶಿವಕುಮಾರ್ ರವರ ವಿರುದ್ಧ ಎಫ್.ಐ.ಆರ್. ದಾಖಲಿಸಿ ಕೂಡಲೇ ಅವರನ್ನು ಬಂಧಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ಜಿಲ್ಲಾ ಜಾತ್ಯಾತೀತ ಜನತಾದಳದ ಎಸ್.ಸಿ.ಘಟಕದ ಅದ್ಯಕ್ಷರಾದ ಪರಮೇಶ್ವರಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಣ್ಣ, ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯಕ್, ಚಿತ್ರದುರ್ಗ ತಾಲ್ಲೂಕು ಘಟಕದ ಅಧ್ಯಕ್ಷರಾದ ಸಣ್ಣ ತಿಮ್ಮಣ್ಣ, ಚಿದಾನಂದ ಸ್ವಾಮಿ, ಮಹಾಂತೇಶ್, ಕರಿಯಪ್ಪ, ರುದ್ರಪ್ಪ, ದುರುಗೇಶ್, ಮಾಲತೇಶ್, ಉಮಾಶಂಕರ್, ಹನುಮಂತರಾಯ್, ಬಸವರಾಜು, ನಾಗರಾಜು, ನರಸಿಂಹಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.

### ಜಾನ್ ಮೈನ್ಸ್ ವತಿಯಿಂದ ನಿರಾಶ್ರಿತರಿಗೆ 500 ಕಿಟ್ ವಿತರಣೆ



ಚಿತ್ರದುರ್ಗ: ಜಾನ್ ಮೈನ್ಸ್ ಆಫ್ ಆರ್. ಪ್ರವೀಣ್‌ಚಂದ್ರ ವತಿಯಿಂದ ಒಟ್ಟು 500 ನಿರಾಶ್ರಿತ ಕುಟುಂಬಗಳಿಗೆ ಪಡಿತರ ಕಿಟ್ ವಿತರಣೆ ಮಾಡಲಾಯಿತು. ತಮಟಕಲ್ಲು ರಸ್ತೆ, ಮಾಳಪ್ಪನಹಟ್ಟಿ ರಸ್ತೆ ಹಾಗೂ ಸೀಬಾರದ ನಿರಾಶ್ರಿತ ಕುಟುಂಬಗಳಿಗೆ ಪಡಿತರ ಕಿಟ್ ವಿತರಿಸಲಾಯಿತು. ಈ ಸಂದರ್ಭದಲ್ಲಿ ಇಆರ್‌ಎಂ ಗ್ರೂಪ್ ಸಿಎಸ್‌ಆರ್ ಮುಖ್ಯಸ್ಥ ಕೆ.ಎಸ್. ಮಂಜುನಾಥ್, ಜಾನ್ ಮೈನ್ಸ್ ಡೆಪ್ಯೂಟಿ ಜನರಲ್ ಮ್ಯಾನೇಜರ್ ರಣದಿವೆ ಹಾಗೂ ಡೆಪ್ಯೂಟಿ ಮ್ಯಾನೇಜರ್ (ಎನ್ವಿರಾನ್ವೆಂಟ್) ಅಜಿತ್ಕುಮಾರ್ ಬಿ. ಮಾಲಿ ಉಪಸ್ಥಿತರಿದ್ದರು.

### ಅಪಾಯಕಾರಿಯಾದ ಮರಗಳ ತೆರವು

ದಾವಣಗೆರೆ: ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಮಳೆ ಗಾಳಿಗೆ ಮತ್ತು ಇತರೆ ನೈಸರ್ಗಿಕ ಕಾರಣಗಳಿಂದಾಗಿ ಕೆಲವೊಂದು ಮರಗಳು ಟೊಳ್ಳಾಗಿ, ಬಾಗಿ ಒಣಗಿ ಸಂಚಾರಕ್ಕೆ ಆಸ್ತಿಪಾಸ್ತಿಗೆ ಅಪಾಯಕಾರಿಯಾಗಿರುತ್ತದೆ. ಇಂತಹ ಮರಗಳನ್ನು ಆದ್ಯತೆಯ ಮೇಲೆ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದು. ಇಂತಹ ಮರಗಳನ್ನು ಸಾರ್ವಜನಿಕರು ಗಮನಿಸಿದಾಗ ಅರಣ್ಯ ಇಲಾಖೆ ಅಥವಾ ಮಹಾನಗರಪಾಲಿಕೆಗೆ ಮಾಹಿತಿ ನೀಡಬೇಕೆಂದು ವಲಯ ಅರಣ್ಯಾಧಿಕಾರಿ ತಿಳಿಸಿದ್ದಾರೆ.

---

## ಪ್ರಮುಖ ಸುದ್ದಿ

#### ಆಲಿಸಿರಿ ತಾಯಂದಿರೇ, ನಿಮ್ಮ ಕರುಳಿನ ಕುಡಿಯ ಪ್ರೇಮದ ನುಡಿಯ ಕಿಲ್ಕಾರಿ ಯೋಜನೆ ಸದುಪಯೋಗ ಪಡಿಸಿಕೊಳ್ಳಿ

# ತಾಯಿ, ಮಗುವಿಗೆ "ಕಿಲ್ಕಾರಿ" ರಕ್ಷೆ: ಡಾ.ಡಿ.ಎಂ.ಅಭಿವನ್

» ಚಿತ್ರದುರ್ಗ

ವಿವಿಧ ಕಾರಣಗಳಿಗೆ ತಾಯಿ ಮತ್ತು ಶಿಶು ಮರಣ ಸಂಭವಿಸುವ ಸಾಧ್ಯತೆಯನ್ನು ತಪ್ಪಿಸುವ ಉದ್ದೇಶದಿಂದ ಆರೋಗ್ಯ ಇಲಾಖೆ ವತಿಯಿಂದ "ಕಿಲ್ಕಾರಿ" ಎಂಬ ಉಚಿತ ಮೊಬೈಲ್ ಆರೋಗ್ಯ ಸೇವೆ ಜಾರಿಗೆ ತಂದಿದ್ದು, ಅರ್ಹ ಫಲಾನುಭವಿಗಳು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ. ಅಭಿನವ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ಮಾಸಿಕ ಸಭೆಯಲ್ಲಿ ಪಾಲ್ಗೊಂಡು, ಗರ್ಭಿಣಿಯರ ಮನೆ ಭೇಟಿ ನಡೆಸಿ, ಕಾಸವರಹಟ್ಟಿ ಮತ್ತು ಹಳೇದ್ಯಾಮವ್ವನಹಳ್ಳಿ ಅಂಗನವಾಡಿ ಕೇಂದ್ರಗಳಲ್ಲಿ ಶುಕ್ರವಾರ ಗರ್ಭಿಣಿ ಮತ್ತು ಮಕ್ಕಳ ತಾಯಂದಿರ ಸಭೆ ನಡೆಸಿ "ಕಿಲ್ಕಾರಿ" ಯೋಜನೆಯ ಬಗ್ಗೆ ಮಾಹಿತಿ ಶಿಕ್ಷಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಿಲ್ಕಾರಿ ಯೋಜನೆಯು ಹೊಸ ಮತ್ತು ಹಾಲಿ ಗರ್ಭಿಣಿಯರಿಗೆ ಗರ್ಭಧಾರಣೆ, ಹೆರಿಗೆ ಮತ್ತು ಮಕ್ಕಳ ಆರೈಕೆಯ ಬಗ್ಗೆ ಶಿಕ್ಷಣ ನೀಡಲು ಮೊಬೈಲ್ ಆಧಾರಿತ ಸೇವೆ. ಆರೋಗ್ಯ ಫಲಿತಾಂಶ ಹೆಚ್ಚಿಸಲು ತಂತ್ರಜ್ಞಾನ ಮತ್ತು ಆರೋಗ್ಯ ರಕ್ಷಣೆ ಒಮ್ಮುಖವಾಗುವ ಯುಗದಲ್ಲಿ, ಕಿಲ್ಕಾರಿ ಕಾರ್ಯಕ್ರಮವು ಸಾರ್ವಜನಿಕ ಆರೋಗ್ಯದಲ್ಲಿ ನಾವೀನ್ಯತೆ ಮತ್ತು ಒಳಗೊಳ್ಳುವಿಕೆಯ ದಾರಿದೀಪವಾಗಿ ಎದ್ದು ಕಾಣುತ್ತದೆ ಎಂದು ಹೇಳಿದರು.



"ಕಿಲ್ಕಾರಿ" ಕಾರ್ಯಕ್ರಮವು ಮೊಬೈಲ್ ಆಧಾರಿತ ಸೇವೆಯಾಗಿದ್ದು, ಇದು 2016ರ ಜನವರಿ 15 ರಂದು ಡಿಜಿಟಲ್ ಇಂಡಿಯಾ ಉಪಕ್ರಮದಭಾಗವಾಗಿಹೊಸಮತ್ತುಹಾಲಿ ಗರ್ಭಿಣಿಯರಿಗಾಗಿ ಪ್ರಾರಂಭಿಸಲ್ಪಟ್ಟಿದ್ದು, ಇದು ಫಲಾನುಭವಿಗಳಿಗೆ ನೇರವಾಗಿ ತಲುಪುವ ಗುರಿ ಹೊಂದಿದೆ. ಹೊಸ ಮತ್ತು ನಿರೀಕ್ಷಿತ ತಾಯಂದಿರಿಗೆ ಪ್ರಮುಖ ಆರೋಗ್ಯ ಮಾಹಿತಿಯನ್ನು ನೇರವಾಗಿ ತಲುಪಿಸಲು ಮೊಬೈಲ್ ತಂತ್ರಜ್ಞಾನ ಬಳಸಿಕೊಳ್ಳುತ್ತದೆ. ಗರ್ಭಧಾರಣೆ, ಹೆರಿಗೆ ಮತ್ತು ಶಿಶುಪಾಲನೆಯ ಬಗ್ಗೆ ಸಂದೇಶಗಳನ್ನು ತಲುಪಿಸುವ ಮೂಲಕ ನವಜಾತ ಶಿಶುಗಳ ಆರೈಕೆಗಾಗಿ ಆರೋಗ್ಯಕರ ಆಯ್ಕೆಗಳನ್ನು ಮಾಡಲು ಅವರನ್ನು ಪ್ರೋತ್ಸಾಹಿಸಲಾಗುತ್ತದೆ ಎಂದು ಹೇಳಿದರು.

ಭಾರತದಲ್ಲಿ ತಾಯಂದಿರು ಮತ್ತು ಮಕ್ಕಳ ಆರೋಗ್ಯವನ್ನು ಸುಧಾರಿಸುವ ನಿಟ್ಟಿನಲ್ಲಿ ಮಹತ್ವದಹೆಜ್ಜೆಯನ್ನುಗುರುತಿಸಲಾಗುತ್ತಿದೆ. ಇದು ಗರ್ಭಧಾರಣೆಯ ಎರಡನೇ ತ್ರೈಮಾಸಿಕದಿಂದ ಮಗುವಿಗೆ ಒಂದು ವರ್ಷ ತುಂಬುವವರೆಗೆ ಕುಟುಂಬಗಳ ಮೊಬೈಲ್ ಫೋನ್‌ಗಳಿಗೆ ಗರ್ಭಧಾರಣೆ, ಹೆರಿಗೆ ಮತ್ತು ಮಕ್ಕಳ ಆರೈಕೆಯ ಬಗ್ಗೆ ಉಚಿತ, ಸಾಪ್ತಾಹಿಕ ಮತ್ತು ಸಮಯಕ್ಕೆ ಸೂಕ್ತವಾದ ಆಡಿಯೊ ಸಂದೇಶಗಳನ್ನು ನೇರವಾಗಿ ಒದಗಿಸುತ್ತದೆ. ಇದು ಪ್ರತಿ ವಾರದ ಆದ್ಯತೆಯ ಕ್ರಮಗಳನ್ನು ನೆನಪಿಸುತ್ತದೆ ಮತ್ತು ಬಲಪಡಿಸುತ್ತದೆ. ಈ ಕಾರ್ಯಕ್ರಮವು ತಾಯಂದಿರು ಮತ್ತು ಕುಟುಂಬಗಳಿಗೆ ಗರ್ಭಾವಸ್ಥೆಯಲ್ಲಿ ಮತ್ತು ಶೈಶವಾವಸ್ಥೆಯಲ್ಲಿ ಅನುಸರಿಸಬೇಕಾದ ನಡವಳಿಕೆಗಳು ಮತ್ತು ಅಭ್ಯಾಸಗಳ ಬಗ್ಗೆ ತಿಳಿಸುತ್ತದೆ ಎಂದು ತಿಳಿಸಿದರು.

ಕಿಲ್ಕಾರಿ ಯೋಜನೆಯ ಈ ಕಾರ್ಯಕ್ರಮವು ಗರ್ಭಿಣಿಯರು ಮತ್ತು ಮಕ್ಕಳ ಜೀವಗಳನ್ನು ಹಲವಾರು ಅಪಾಯಗಳಿಂದ ರಕ್ಷಿಸುವುದಲ್ಲದೆ, ಆರೋಗ್ಯಕರಫಲಿತಾಂಶಖಚಿತಪಡಿಸುತ್ತದೆ ಎಂದರು.

ಪ್ರಸ್ತುತ ಚಿತ್ರದುರ್ಗ ಜಿಲ್ಲೆಯಲ್ಲಿ ಆರ್.ಸಿ.ಹೆಚ್ ಪೋರ್ಟಲ್‌ನಲ್ಲಿ ನೊಂದಾಯಿತ ಸುಮಾರು 13002 ಗರ್ಭೀಣಿಯರು ಮತ್ತು 26952 ಒಂದು ವರ್ಷದೊಳಗಿನ ಮಕ್ಕಳ ತಾಯಂದಿರು ನಿರಂತರವಾಗಿ ಪ್ರತಿವಾರಕ್ಕೊಮ್ಮೆ ಕಿಲ್ಕಾರಿ ಕರೆಯನ್ನು ಸ್ವೀಕರಿಸುವುದರ ಮೂಲಕ ತಮ್ಮ ಗರ್ಭಾವಸ್ಥೆಯ ಮಾಹೆಯ ಅನುಸಾರ ಅಥವಾ ಮಗುವಿನ ಬೆಳವಣಿಗೆಯ ಮಾಹೆಯ ಅನುಸಾರವಾಗಿ ಆರೋಗ್ಯ ಸೇವೆಯ ಮಾಹಿತಿಯನ್ನು ಪಡೆದುಕೊಳ್ಳುತಿದ್ದಾರೆ. ಆಲಿಸಿರಿ ತಾಯಂದಿರೇ, ನಿಮ್ಮ ಕರುಳಿನ ಕುಡಿಯ ಪ್ರೇಮದ ನುಡಿಯ ಕಿಲ್ಕಾರಿ ಯೋಜನೆ ಸದುಪಯೋಗ ಪಡಿಸಿಕೊಳ್ಳಿ ಎಂದು ಕರೆ ನೀಡಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಕಿಲ್ಕಾರಿ ಕಾರ್ಯಕ್ರಮವು ಚತುರತೆಯಿಂದ ಸರಳವಾಗಿದೆ. ಆದರೆ ಗಾಢವಾಗಿ ಪ್ರಭಾವಶಾಲಿಯಾಗಿದೆ. ಸಂತಾನೋತ್ಪತ್ತಿ ಮಕ್ಕಳ ಆರೋಗ್ಯ ಆರ್‌ಸಿಹೆಚ್ ಪೋರ್ಟಲ್‌ನಲ್ಲಿ ನೋಂದಾಯಿಸಲ್ಪಟ್ಟ ಮಹಿಳೆಯರು, ಅವರ ಕೊನೆಯ ಮುಟ್ಟಿನ ಅವಧಿ ಅಥವಾ ಅವರ ಮಗುವಿನ ಜನ್ಮ ದಿನಾಂಕ ಆಧರಿಸಿ, ಪೂರ್ವ-ರೆಕಾರ್ಡ್ ಮಾಡಿದ ಆಡಿಯೊ ವಿಷಯದೊಂದಿಗೆ ವಾರಕ್ಕೊಮ್ಮೆ ಕರೆಯನ್ನು ಸ್ವೀಕರಿಸುತ್ತಾರೆ. ಈ ವಿಷಯವನ್ನು ಗರ್ಭಿಣಿಯರು ಮತ್ತು ಒಂದು ವರ್ಷದೊಳಗಿನ ಮಕ್ಕಳಿರುವ ತಾಯಂದಿರ ಮೊಬೈಲ್ ಫೋನ್‌ಗಳಿಗೆ ನೇರವಾಗಿ ತಲುಪಿಸಲಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆಡಳಿತ ಆರೋಗ್ಯಾಧಿಕಾರಿ ಡಾ.ಕಾವ್ಯ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ, ಬಿ.ಜಾನಕಿ, ಆರೋಗ್ಯ ಸುರಕ್ಷತಾಧಿಕಾರಿಗಳಾದ ಆಶಾ, ಮನುಜಾ, ವೀಣಾ, ಸಮುದಾಯ ಆರೋಗ್ಯಾಧಿಕಾರಿಗಳಾದ ಶಾಂತಲಾ, ಸುರೇಶ್, ಆರೋಗ್ಯ ನಿರೀಕ್ಷಣಾಧಿಕಾರಿ ತುಕಾರಾಂ, ಆಶಾ ಕಾರ್ಯಕರ್ತೆ ರತ್ನಮ್ಮ, ಗರ್ಭಿಣಿ ಮಹಿಳೆಯರು, ಮಕ್ಕಳ ತಾಯಂದಿರು ಇದ್ದರು.

## ಫಾಸ್ಟ್ ನ್ಯೂಸ್

### ಪ್ರಧಾನ ಮಂತ್ರಿ ಇಂಟರ್ನ್ ಶಿಪ್ ತರಬೇತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಡೇ-ನಲ್ಮ್ ಅಭಿಯಾನದಡಿ ಪ್ರಧಾನ ಮಂತ್ರಿ ಇಂಟರ್ನ್ ಶಿಪ್ ಕಾರ್ಯಕ್ರಮದಡಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೊಮಾ, ಇತರೆ ಪದವಿ ವಿದ್ಯಾರ್ಹತೆ ಹೊಂದಿರುವ ಇಚ್ಛೆಯುಳ್ಳ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಈ ಯೋಜನೆಯಡಿ ಪ್ರತಿಷ್ಠಿತ ಕಂಪನಿಗಳಿಂದ ಉದ್ಯೋಗಾಧಾರಿತ ಕೌಶಲ್ಯ ಹಾಗೂ ಇಂಟರ್ನ್ ಶಿಪ್ ಅವಕಾಶ ಒದಗಿಸುವುದರ ಮೂಲಕ ನವೀನ ರೀತಿಯ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳಲು ಉತ್ತಮ ವೇದಿಕೆಯಾಗಿದೆ. ಅಲ್ಲದೇ ತರಬೇತಿ ಅವಧಿಯಲ್ಲಿ ಮಾರ್ಗಸೂಚಿಯನುಸಾರ ರೂ.5000/ ಶಿಷ್ಯವೇತನ ನೀಡಲಾಗುವುದು. ಆಸಕ್ತ ಅರ್ಹ ಅಭ್ಯರ್ಥಿಗಳು ಪಿಎಂಇ ಜಾಲತಾಣ https://pmintrnship.mca.gov.in/login ನಲ್ಲಿ ಇದೇ ಮಾರ್ಚ್ 31ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮಹಾನಗರ ಪಾಲಿಕೆಯ ಡೇ-ನಲ್ಮ್ ಸಿಬ್ಬಂದಿಯನ್ನು ಸಂಪರ್ಕಿಸಬಹುದು ಎಂದು ಮಹಾನಗರ ಪಾಳಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಗ್ನಿಬನ್ನಿರಾಯ ಮಹಾನ್‌ಪರಾಕ್ರಮಿ: ರೇಹಾನ್‌ಪಾಷ



» ಚಳ್ಳಕೆರೆ

ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಸಹಯೋಗದೊಂದಿಗೆ ಅಗ್ನಿಬನ್ನಿರಾಯ ಜಯಂತಿಯನ್ನು ಆಚರಿಸಲಾಯಿತು. ತಹಶೀಲ್ದಾರ್ ರೇಹಾನ್‌ಪಾಷ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಸರ್ಕಾರ ಇತ್ತೀಚಿನ ವರ್ಷಗಳಲ್ಲಿ ದೇಶ, ಸಮಾಜಕ್ಕಾಗಿ ಶ್ರಮಿಸಿದ ಅನೇಕ ಮಹಾನೀಯರನ್ನು ನೆನಪಿಸಿಕೊಳ್ಳುವ ಕಾರ್ಯವನ್ನು ಜಯಂತಿ ಆಚರಣೆ ಮೂಲಕ ಮಾಡಲಾಗುತ್ತಿದೆ. ಅಗ್ನಿಬನ್ನಿರಾಯ ಉಜ್ವಲರಾಷ್ಟ್ರಪ್ರೇಮಿ ಹಾಗೂ ಧಾರ್ಮಿಕ ಚಿಂತಕರಾಗಿದ್ದರು ಎಂದರು. ಕಾರ್ಯಕ್ರಮದಲ್ಲಿ ಕಂದಾಯಾಧಿಕಾರಿ ಪಿ.ಎಲ್.ಲಿಂಗೇಗೌಡ, ಆರ್.ತಿಪ್ಪೇಸ್ವಾಮಿ, ಸಿಬ್ಬಂದಿಗಳಾದ ಬಸವರಾಜು, ಡಿ.ಶ್ರೀನಿವಾಸ್, ರೋಷನ್, ಹನುಮಂತಪ್ಪ, ಸಿದ್ದಲಿಂಗಸ್ವಾಮಿ, ಬೋರಣ್ಣ ಮುಂತಾದವರು ಉಪಸ್ಥಿತರಿದ್ದರು.

### ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

» ಚಿತ್ರದುರ್ಗ

ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟ ಮಾಡಲಾಗಿದ್ದು, ಈ ಕುರಿತು ಆಕ್ಷೇಪಣೆ ಸಲ್ಲಿಸಲು ಏಪ್ರಿಲ್ 5 ಕೊನೆಯ ದಿನವಾಗಿದೆ. ಚಿತ್ರದುರ್ಗ ಜಿಲ್ಲೆಯ ಭರಮಸಾಗರ, ಚಿತ್ರದುರ್ಗ, ಚಳ್ಳಕೆರೆ, ಹಿರಿಯೂರು, ಹೊಳಲ್ಕೆರೆ, ಹೊಸದುರ್ಗ ಮತ್ತು ಮೊಳಕಾಲ್ಮುರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ 64 ಅಂಗನವಾಡಿ ಕಾರ್ಯಕರ್ತೆ, 03 ಮಿನಿ ಅಂಗನವಾಡಿ ಕಾರ್ಯಕರ್ತೆ ಹಾಗೂ 149 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ ಭರ್ತಿ ಮಾಡಲು 2024ರ ಜುಲೈ 29ರಂದು ಅಧಿಸೂಚನೆ ಹೊರಡಿಸಲಾಗಿತ್ತು.ಈ ಹುದ್ದೆಗಳ ನೇಮಕಾತಿಗಾಗಿ 2025ರ ಮಾರ್ಚ್ 20ರಂದು ನಡೆದ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯಲ್ಲಿ ತಾತ್ಕಾಲಿಕವಾಗಿ ಆಯ್ಕೆಯಾಗಿರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಪರಿಷ್ಕೃತ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಆಯಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯ ಸೂಚನಾ ಫಲಕ,ಅಂಗನವಾಡಿ ಕೇಂದ್ರಗಳ ಮುಂದೆ, ಗ್ರಾಮ ಪಂಚಾಯತಿ, ಶಾಲೆ, ಸಮುದಾಯ ಭವನ ಹಾಗೂ ಗ್ರಂಥಾಲಯಗಳಲ್ಲಿ ಪ್ರಕಟಿಸಲಾಗಿದ್ದು, ಈ ಆಯ್ಕೆ ಕುರಿತು ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ 2025ರ ಏಪ್ರಿಲ್ 05ರ ಸಂಜೆ 5.30 ಗಂಟೆಯೊಳಗೆ ಆಯಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸಲ್ಲಿಸುವುದು. ತಡವಾಗಿ ಬಂದ ಹಾಗೂ ಸೂಕ್ತ ದಾಖಲೆಗಳಿಲ್ಲದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ತಿಳಿಸಿದ್ದಾರೆ.

### 2 ರಂದು ದಾವಣಗೆರೆ ವಿವಿ 12ನೇ ಘಟಿಕೋತ್ಸವ

» ದಾವಣಗೆರೆ

ದಾವಣಗೆರೆ ವಿವಿ 12ನೇ ಘಟಿಕೋತ್ಸವವು ಏಪ್ರಿಲ್ 2 ರಂದು ಬೆಳಿಗ್ಗೆ 11.30ಕ್ಕೆ ತೋಳಹುಣಸೆಯಲ್ಲಿನ ಜ್ಞಾನಸೌಧ ಶಿವಗಂಗೋತ್ರಿ ಆವರಣದಲ್ಲಿ ನಡೆಯಲಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ದಾವಣಗೆರೆ ವಿವಿ ಕುಲಾಧಿಪತಿಗಳಾದ ಥಾವರ್ ಚಂದ್ ಗೆಹ್ಲೋಟ್ ಅವರು ವಹಿಸುವರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ

# ಡಾ.ಬಾಬು ಜಗಜೀವನರಾಂ, ಡಾ.ಅಂಬೇಡ್ಕರ್ ಜಯಂತಿ: ಅರ್ಥಪೂರ್ಣ ಆಚರಣೆಗೆ ನಿರ್ಧಾರ

» ಚಿತ್ರದುರ್ಗ



ಜಿಲ್ಲಾ ಕೇಂದ್ರದಲ್ಲಿ ಈ ಬಾರಿ ಡಾ.ಬಾಬು ಜಗಜೀವನರಾಂ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ರವರ ಜಯಂತಿಗಳನ್ನು ಅರ್ಥಪೂರ್ಣ ಹಾಗೂ ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಬರುವ ಏಪ್ರಿಲ್ 05 ರಂದು ಡಾ.ಬಾಬು ಜಗಜೀವನರಾಂ ಅವರ 118ನೇ ಜನ್ಮ ದಿನಾಚರಣೆ ಹಾಗೂ ಏಪ್ರಿಲ್ 14 ರಂದು ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಆಚರಿಸುವ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋವಿಡ್ ಹಾಗೂ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆ ನೀತಿ ಸಂಹಿತೆಯ ಹಿನ್ನಲೆಯಲ್ಲಿ ಕಳೆದ ಮೂರು-ನಾಲ್ಕು ವರ್ಷಗಳಿಂದ ಉಭಯ ಮಹನೀಯರಜಯಂತಿಯನ್ನುಸರಳವಾಗಿ ಆಚರಿಸಲಾಗಿದೆ. ಈ ಬಾರಿ ಮಹಾ ನಾಯಕರ ಜಯಂತಿಯನ್ನು ವಿಶೇಷ ರೀತಿಯಲ್ಲಿ ಹಾಗೂ ಮಾದರಿಯಾಗಿ ಆಚರಿಸಲು ಕ್ರಮ ವಹಿಸಲಾಗುವುದು. ಎಲ್ಲ ಅಧಿಕಾರಿಗಳು, ಸಿಬ್ಬಂದಿಗಳು ತಪ್ಪದೆ ಜಯಂತಿ ಕಾರ್ಯಕ್ರಮಗಳಿಗೆ ಹಾಜರಾಗುವಂತೆ ಸೂಚನೆ ನೀಡಲಾಗುವುದು. ಜಾತಿ ಬೇಧವಿಲ್ಲದೆ ಎಲ್ಲ ಸಮುದಾಯ, ಸಂಘಟನೆ, ಸಮಾಜದವರು ಉಭಯ ಮಹನೀಯರ ಜಯಂತಿಯಲ್ಲಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಇದೇ ಸಂದರ್ಭದಲ್ಲಿ ಮನವಿ ಮಾಡಿದರು.

ಏಪ್ರಿಲ್ 05ರಂದು ಡಾ.ಬಾಬು ಜಗಜೀವನರಾಂ ಅವರ 118ನೇ ಜನ್ಮ ದಿನಾಚರಣೆ ಅಂಗವಾಗಿ ಅಂದು ಬೆಳಿಗ್ಗೆ 9ಕ್ಕೆ ನಗರದ ನೀಲಕಂಠೇಶ್ವರ ದೇಗುಲದಿಂದ ಮೆರವಣಿಗೆಗೆ ಚಾಲನೆ ನೀಡಿ, ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗುವುದು.

ಏಪ್ರಿಲ್ 14ರಂದು ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಅಂಗವಾಗಿ ಅಂದು ಬೆಳಿಗ್ಗೆ 9ಕ್ಕೆ ನಗರದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಿಂದ ಮೆರವಣಿಗೆ ಪ್ರಾರಂಭವಾಗಲಿದ್ದು, ಮೆರವಣಿಗೆಯಲ್ಲಿ ವಿವಿಧ ಇಲಾಖೆಗಳ ಸ್ತಬ್ಧಚಿತ್ರಗಳು, ವೈವಿಧ್ಯಮಯ ಜಾನಪದ ಕಲಾತಂಡಗಳು ಭಾಗವಹಿಸಲಿವೆ. ನಗರದ ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಮಹನೀಯರ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ ಹಾಗೂ ಗಾಯಕರಿಂದ ಕ್ರಾಂತಿಗೀತೆಗಳನ್ನು ಹಾಡಲು ಕ್ರಮವಹಿಸಲಾಗುವುದು ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಅಂಗವಾಗಿ ಏಪ್ರಿಲ್ 13ರಂದು ನಗರದ ಚಳ್ಳಕೆರೆ ರಸ್ತೆಯಿಂದ ಕನಕ ವೃತ್ತದವರೆಗೂ ದೀಪಾಲಂಕಾರಕ್ಕೆ ವ್ಯವಸ್ಥೆ ಮಾಡಿ, ಹಬ್ಬದ ರೀತಿಯಲ್ಲಿ ನಗರವನ್ನು ಅಲಂಕರಿಸಿ, ಜಯಂತಿ ಆಚರಿಸಲಾಗುವುದು. ಸಮಾಜದ ಮುಖಂಡರ ಬೇಡಿಕೆಯಂತೆ ಹೋರಾಟಗಾರರಿಗೆ ಹಾಗೂ ರ್‍ಯಾಂಕ್ ಪಡೆದ, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿ ನೀಡಲಾಗುವುದು. ಪ್ರತಿ ತಾಲ್ಲೂಕುಗಳಿಂದಲೂ ಪ್ರಶಸ್ತಿಗಾಗಿ ಆಯ್ಕೆ ಮಾಡಲು ಜಿಲ್ಲಾ ಮಟ್ಟದಲ್ಲಿಯೇ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರನ್ನು ಒಳಗೊಂಡಂತೆ ಸಮಿತಿಯನ್ನು ರಚಿಸಲಾಗುವುದು. ಸಮಿತಿ ನೀಡುವ ಶಿಫಾರಸ್ಸಿನಂತೆ ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗಾಗಿ ವಿವಿಧ ಇಲಾಖೆಗಳಲ್ಲಿ ಜಾರಿಯಲ್ಲಿರುವ ಯೋಜನೆಗಳು, ಯೋಜನೆಯ ಸೌಲಭ್ಯ ಪಡೆಯಲು ಇರುವ ಮಾನದಂಡಗಳು, ನೀಡಬೇಕಿರುವ ದಾಖಲೆಗಳು ಮುಂತಾದ ಸಮಗ್ರ ವಿವರಗಳನ್ನು ಒಳಗೊಂಡಂತೆ ಕಿರುಹೊತ್ತಿಗೆಯನ್ನುತಯಾರಿಸಿ ವಿತರಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದ ಜಿಲ್ಲಾಧಿಕಾರಿಗಳು, ಇದನ್ನು ಕೇವಲ ಜಯಂತಿ ಸಂದರ್ಭಕ್ಕಾಗಿ ಮಾತ್ರವಲ್ಲ, ಇತರೆ ಕಾರ್ಯಕ್ರಮಗಳಲ್ಲೂ ವಿತರಿಸಲು ಕ್ರಮ ವಹಿಸಲಾಗುವುದು. ಪರಿಶಿಷ್ಟ ಜಾತಿ ಮತ್ತು ಪಂಗಡದವರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ಪ್ರತಿ ತಿಂಗಳಿಗೊಮ್ಮೆ ಸಭೆ ನಡೆಸಿ, ಅಹವಾಲು ಸ್ವೀಕರಿಸಲಾಗುವುದು ಎಂದರು.

ಸಮಾಜದ ಮುಖಂಡರ ಸಲಹೆಗಳು: ಮಹನೀಯರ ಜಯಂತಿ ಅಂಗವಾಗಿ ಅರ್ಥಪೂರ್ಣವಾಗಿ ಜಯಂತಿ ಅಚರಿಸುವ ನಿಟ್ಟಿನಲ್ಲಿ ಸಮಾಜದ ಮುಖಂಡರು ಹಲವು ಸಲಹೆ-ಸೂಚನೆಗಳನ್ನು ನೀಡಿದರು.

ಮಹನೀಯರ ಜಯಂತಿ ಕಾರ್ಯಕ್ರಮಗಳು ಸಾಂಸ್ಕೃತಿಕ ಕಾರ್ಯಕ್ರಮದ ಮೆರವಣಿಗೆ ನಡೆಸುವ ಮೂಲಕ ಸಾರ್ವಜನಿಕವಾಗಿ ಮಹಾನಾಯಕರಿಗೆ ನಮನ ಸಲ್ಲಿಸುವ ಕೆಲಸವಾಗಬೇಕು. ಸಮಾಜಮುಖಿಯಾಗಿ ಹಾಗೂ ಹಬ್ಬದ ರೀತಿಯಲ್ಲಿ ಜಯಂತಿ ಆಚರಿಸಬೇಕು. ಎಲ್ಲ ಸಮುದಾಯಗಳು, ಸಂಘ ಸಂಸ್ಥೆಗಳು ಸೇರಿ ಅದ್ದೂರಿಯಾಗಿ ಆಚರಿಸಬೇಕು. ಹೋರಾಟದ ಮಾಡಿದ ನಾಯಕರಿಗೆ ಜಿಲ್ಲಾ ಮಟ್ಟದಲ್ಲಿ ಅಂಬೇಡ್ಕರ್ ಹಾಗೂ ಜಗಜೀವನ್‌ರಾಂ ಪ್ರಶಸ್ತಿ ನೀಡಿ, ಗುರುತಿಸುವ ಕೆಲಸವಾಗಬೇಕು. ಈ ಪ್ರಶಸ್ತಿ ಆಯ್ಕೆಗಾಗಿ ಆಯ್ಕೆ ಸಮಿತಿ ರಚಿಸಬೇಕು. ಚಿತ್ರದುರ್ಗ ನಗರದ ಎಲ್ಲ 35 ವಾರ್ಡ್‌ಗಳಲ್ಲಿಯೂ ಸಹ ಜಗಜೀವನರಾಂ ಹಾಗೂ ಅಂಬೇಡ್ಕರ್ ಅವರ ಹೆಸರಿನಲ್ಲಿ ಶುದ್ಧ ಕುಡಿಯುವ ನೀರು ಘಟಕ ಹಾಗೂ ಗ್ರಂಥಾಲಯ ಸ್ಥಾಪಿಸಬೇಕು. ನಗರದ ಯಾವುದಾದರೂ ಒಂದು ವೃತ್ತದಲ್ಲಿ ಬಾಬು ಜಗಜೀವನ್‌ರಾಂ ಪುತ್ಥಳಿ ಪ್ರತಿಷ್ಠಾಪಿಸಬೇಕು ಎಂದು ಸಲಹೆಗಳು ಕೇಳಿ ಬಂದವು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಡಿವೈಎಸ್‌ಪಿ ಪಿ.ಕೆ.ದಿನಕರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮುದಾಯ ಮುಖಂಡರಾದ ನಗರಸಭೆ ಮಾಜಿ ಅಧ್ಯಕ್ಷ ನಿರಂಜನಮೂರ್ತಿ, ಜಯಣ್ಣ, ಬಿ.ರಾಜಪ್ಪ, ಕೆ.ಟಿ. ಶಿವಕುಮಾರ್, ಕೆ.ಕುಮಾರ್, ದುರುಗೇಶಪ್ಪ, ಪ್ರಸನ್ನ, ಗೌನಹಳ್ಳಿ ಗೋವಿಂದಪ್ಪ, ಮಹಂತೇಶ್, ಡಿ.ಎನ್.ಮೈಲಾರಪ್ಪ, ವೈ. ರಾಜಣ್ಣ, ಅವಿನಾಶ್, ನಾಗರಾಜಕಟ್ಟೆ, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಡಿ.ಗೋಪಾಲಸ್ವಾಮಿ ನಾಯಕ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರು, ಮತ್ತಿತರರು ಇದ್ದರು.

## ನೂತನ ಅಂಬೇಡ್ಕರ್ ಪ್ರತಿಮೆ ಸ್ಥಾಪನೆಗೆ ನಿರ್ಧಾರ

» ಚಳ್ಳಕೆರೆ



ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಜಯಂತಿ, ಹಸಿರು ಕ್ರಾಂತಿಹರಿಕಾರ ಡಾ.ಬಾಬು ಜಗಜೀವನರಾಮ್‌ರವರ 118ನೇ ಜಯಂತಿ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಿಸುವ ನಿಟ್ಟಿನಲ್ಲಿ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಅಧ್ಯಕ್ಷತೆಯಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಪೂರ್ವಭಾವಿ ಸಭೆ ಶುಕ್ರವಾರ ನಡೆಯಿತು.

ಪೂರ್ವಬಾವಿಸಭೆಯಲ್ಲಿ ದಲಿತ ಸಮುದಾಯದವಿವಿಧಸಂಘಟನೆಗಳನೇತಾರರು, ಸಮಾಜದ ಸೇವಕರು, ವಿವಿಧ ಸಮುದಾಯದ ಮುಖಂಡರು, ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಸಲಹೆ ಸೂಚನೆಗಳನ್ನು ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಇಬ್ಬರೂ ಮಹಾನ್ ನಾಯಕರ ಜಯಂತಿ ಕಾರ್ಯಕ್ರಮವನ್ನು ಅದ್ದೂರಿ, ಅರ್ಥಗರ್ಭಿವಾಗಿ ಆಚರಿಸುವ ನಿಟ್ಟಿನಲ್ಲಿ ಉತ್ತಮ ಸಲಹೆಗಳನ್ನು ಸಭೆಯಲ್ಲಿ ವ್ಯಕ್ತಪಡಿಸಿದ್ದೀರಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಎಲ್ಲರೂ ತಾಲ್ಲೂಕು ಆಡಳಿತ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯೊಂದಿಗೆ ಕೈಜೋಡಿಸಬೇಕಿದೆ. ಈ ಬಾರಿ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಕಾರ್ಯಕ್ರಮವನ್ನು ಆಚರಿಸಲಾಗುವುದು. ಚಿತ್ರದುರ್ಗ ರಸ್ತೆಯ ಡಾ.ಬಾಬು ಜಗಜೀವನರಾಮ್ ವೃತ್ತದಿಂದ ಇಬ್ಬರೂ ಮಹಾನ್ ನಾಯಕ ಭಾವಚಿತ್ರವನ್ನು ಭವ್ಯವಾದ ಮೆರವಣಿಗೆಯಲ್ಲಿ ತಾಲ್ಲೂಕು ಕಚೇರಿ ಆವರಣಕ್ಕೆ ಮಂಗಳವಾದ್ಯಂಗಳೊಂದಿಗೆಕರೆತರಲಾಗುವುದು. ಮೆರವಣಿಗೆಯಲ್ಲಿ ಕಡ್ಡಾಯವಾಗಿ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿ ವರ್ಗ, ಸಂಘ, ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಬೇಕು.

ಈ ಬಾರಿ ವಿಶೇಷವಾಗಿ ತಾಲ್ಲೂಕು ಕಚೇರಿ ಮುಂಭಾಗದ ಅಂಬೇಡ್ಕರ್ ವೃತ್ತದಲ್ಲಿರುವ ಈಗಿರುವ ಅಂಬೇಡ್ಕರ್ ಪ್ರತಿಮೆಯನ್ನು ಬದಲಾಯಿಸಿ ಅದೇ ಜಾಗದಲ್ಲಿ ನೂತನವಾಗಿ ನಿರ್ಮಿಸಿದ ಹೊಸ ಪ್ರತಿಮೆಯನ್ನು ಅಂಬೇಡ್ಕರ್ ಜಯಂತಿ ದಿನದಂದು ಪ್ರತಿಷ್ಠಾಪಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯ ಸಾರ್ವಜನಿಕರು ಖುದ್ದುಹಾಜರಿದ್ದು ಸಂವಿಧಾನ ಶಿಲ್ಪಿ ಹಾಗೂ ಹಸಿರುಕ್ರಾಂತಿ ಹರಿಕಾರಗೆ ಗೌರವ ಸೂಚಿಸಬೇಕೆಂದರು.

ನಗರಸಭೆ ಪೌರಾಯುಕ್ತ ಎಚ್.ಜಿ.ಜಗರೆಡ್ಡಿಗೆ ನಿರ್ದೇಶಕ ನೀಡಿದ ಶಾಸಕ ಟಿ.ರಘುಮೂರ್ತಿ, ಜಗಜೀವನರಾಮ್ ವೃತ್ತ, ವಾಲ್ಮೀಕಿ ವೃತ್ತ, ಅಂಬೇಡ್ಕರ್, ನೆಹರೂ ವೃತ್ತ ವ್ಯಾಪ್ತಿಯ ಪ್ರದೇಶದಲ್ಲಿ ಪೂರ್ಣಪ್ರಮಾಣದಲ್ಲಿ ಸ್ವಚ್ಚತಾ ಕಾರ್ಯಕೈಗೊಳ್ಳಬೇಕು, ಪ್ರತಿಮೆಗಳನ್ನು ಸ್ವಚ್ಚಗೊಳಿಸಬೇಕು, ಅವಶ್ಯವಿದ್ದಲ್ಲಿ ಬಣ್ಣ ಬಳಿಸಿ ಸುಂದರವಾಗಿ ಎಲ್ಲಾ ಮೂರ್ತಿಗಳು ಕಂಗೊಳಿಸುವಂತೆ ಮಾಡಿ ಎಂದರು.

ಪೂರ್ವಬಾವಿ ಸಭೆಯಲ್ಲಿ ನಗರಸಭೆ ಅಧ್ಯಕ್ಷೆ ಆರ್.ಮಂಜುಳಾ, ಉಪಾಧ್ಯಕ್ಷೆ ಸುಮ, ಸದಸ್ಯರಾದ ಕವಿತಾ, ಸುಜಾತ, ಶಿಲ್ಪಿ, ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ಕೆ.ವೀರಭದ್ರಪ್ಪ, ಚಳ್ಳಕೆರೆಯಪ್ಪ, ನಗರಸಭೆ ಮಾಜಿ ಉಪಾಧ್ಯಕ್ಷ ಟಿ.ವಿಜಯಕುಮಾರ್, ಬಿ.ಪಿ.ಪ್ರಕಾಶ್‌ಮೂರ್ತಿ, ಭಾಗವಹಿಸಿದ್ದರು.

## ಉತ್ತಮ ಆಡಳಿತ ನೀಡುವ ಮೂಲಕ ಜನಮನ್ನಣೆ ಗಳಿಸಿ: ರಘುಮೂರ್ತಿ



» ಚಳ್ಳಕೆರೆ

ನಗರಸಭೆಯ ನೂತನ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಗೊಂಡ ಆರ್.ಮಂಜುಳಾಪ್ರಸನ್ನಕುಮಾರ್ ಶುಕ್ರವಾರ ಕಚೇರಿಯಲ್ಲಿ ಪೂಜೆ ನೆರವೇರಿಸಿ ಅಧಿಕಾರ ಸ್ವೀಕರಿಸಿದರು.

ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಪೂಜೆ ಕಾರ್ಯದಲ್ಲಿ ಪಾಲ್ಗೊಂಡು ಮಾತನಾಡಿ, ನಗರದ ಎಲ್ಲಾ ವಾರ್ಡ್‌ಗಳಲ್ಲೂ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಬೇಕಿದೆ. ಯೋಜನೆ ಸಿದ್ದಪಡಿಸುವಾಗ ಎಲ್ಲಾ ವಾರ್ಡ್‌ಗಳಿಗೂ ಸರ್ಕಾರ ಅನುದಾನವನ್ನು ಪಡೆಯುವಂತೆ ಮಾಡಬೇಕು, ಈಗಾಗಲೇ ಹಲವಾರು ಅಭಿವೃದ್ಧಿ ಕಾಮಗಾರಿಗಳು ಕೈಗೊಂಡಿದ್ದು ನಗರಕ್ಕೆ ಅವಶ್ಯವಿರುವ ಕಾಮಗಾರಿಗಳ ಬಗ್ಗೆ ಮಾಹಿತಿ ಸಿದ್ದಪಡಿಸಿ ನಿಮ್ಮ ಅಧಿಕಾರ ಅವಧಿಯಲ್ಲಿ ಉತ್ತಮ ಕೆಲಸವನ್ನು ಕೈಗೊಳ್ಳುವ ಮೂಲಕ ಜನಮನ್ನಣೆಗಳಿಸಿ ಎಂದರು.


ನೂತನ ಅಧ್ಯಕ್ಷೆ ಆರ್.ಮಂಜುಳಾಪ್ರಸನ್ನಕುಮಾರ್ ಮಾತನಾಡಿ, ಶಾಸಕರ ಮಾರ್ಗದರ್ಶನದಲ್ಲಿ ನಗರಸಭೆಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದರು.

**ಪ್ರಮುಖ ಸುದ್ದಿ**

ಉಪವಿಭಾಗಾಧಿಕಾರಿ ಮಹಿಬೂಬ್ ಜಿಲಾನ್ ಹೇಳಿಕೆ

# ಧರ್ಮ ರಕ್ಷಣೆಗಾಗಿ ಅಗ್ನಿಬನ್ನಿರಾಯರ ಜನನ

» ಚಿತ್ರದುರ್ಗ




ಅಧರ್ಮ, ಅನೀತಿ, ಅರಾಜಕತೆ, ಅತ್ಯಾಚಾರಗಳು ಭೂಮಿಯ ಮೇಲೆ ಹೆಚ್ಚಾದಾಗ ದೇವರು ಅವತಾರ ಎತ್ತಿ, ಇವುಗಳಿಗೆ ಅಂತ್ಯಹಾಡಿ, ಧರ್ಮ ರಕ್ಷಣೆ ಮಾಡುತ್ತಾನೆ ಎಂದು ಹಿಂದು ಧರ್ಮ ಗ್ರಂಥಗಳಲ್ಲಿ ಉಲ್ಲೇಖಿಸಲಾಗಿದೆ. ಅಗ್ನಿಬನ್ನಿರಾಯರು ಸಹ ಧರ್ಮ ರಕ್ಷಣೆಗಾಗಿ ಜನ್ಮಿಸಿದವರು ಎಂದು ಉಪವಿಭಾಗಾಧಿಕಾರಿ ಮಹಿಬೂಬ್ ಜಿಲಾನ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಚಿತ್ರದುರ್ಗ ನಗರಸಭೆ ಸಹಯೋಗದಲ್ಲಿ, ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾದ ಶ್ರೀ ಅಗ್ನಿಬನ್ನಿರಾಯರ ಜಯಂತಿ ಕಾರ್ಯಕ್ರಮದಲ್ಲಿ, ಅಗ್ನಿಬನ್ನಿರಾಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ವೇದಗಳು ಹಾಗೂ 18 ಪುರಾಣಗಳನ್ನು ಓದಿದಾಗ,ನಮಗೆ ದೇವರ ಅವತಾರ ಕುರಿತು ಸ್ಪಷ್ಟಚಿತ್ರಣ ದೊರೆಯುತ್ತದೆ. ದೇವಿಪುರಾಣ, ಶಿವಪುರಾಣ, ವಿಷ್ಣುಪುರಾಣಗಳಂತೆ, ಅಗ್ನಿಬನ್ನಿರಾಯ ಪುರಾಣವು ಅತಿ ಮುಖ್ಯವಾಗಿದೆ. ಅರಾಜಕತೆಯನ್ನು ಉಂಟುಮಾಡುವ ರಾಕ್ಷಸರ ವಧೆ ಮಾಡಿ ಅಗ್ನಿಬನ್ನಿರಾಯರು ಸಮಾಜದಲ್ಲಿ ಶಾಂತಿ ನೆಲಸುವಂತೆ ಮಾಡಿದರು ಎಂದು ಮಹಿಬೂಬ್ ಜಿಲಾನ್ ಹೇಳಿದರು. ಉಪನ್ಯಾಸಕ ಜಿ.ಎನ್.ಯಶೋಧರ್ ಮಾತನಾಡಿ, ಅಗ್ನಿವಂಶ ಕ್ಷತ್ರಿಯರ ಕುಲದೈವ ಅಥವಾ ಮೂಲಪುರುಷ ಎಂದು ಅಗ್ನಿಬನ್ನಿರಾಯರನ್ನು ಪೂಜಿಸಲಾಗುತ್ತದೆ. ಶಿವನ ಮೂರನೆ ಕಣ್ಣಿನಿಂದ ಜನಿಸಿದ ಅಗ್ನಿಬನ್ನಿರಾಯರು ಭೂ ಲೋಕದಲ್ಲಿನ ಅರಾಜಕತೆ ಕೊನೆಗಾಣಿಸಿದರು. ಇಂದ್ರನ ಮಗಳು ಮಂತ್ರಮಲೆಯನ್ನು ಮದುವೆಯಾದ ಅಗ್ನಿಬನ್ನಿರಾಯರ ಮುಂದಿನ ಸಂತತಿಯೇ ಅಗ್ನಿವಂಶ ಕ್ಷತ್ರಿಯರಾಗಿದ್ದಾರೆ ಎಂದು ಪುರಾಣಗಳಲ್ಲಿ ತಿಳಿಸಲಾಗಿದೆ. ಇವರನ್ನು ತಿಗಳ ಜನಾಂಗದವರು ಎಂದು ಸಹ ಕರೆಯಲಾಗುತ್ತದೆ. ತುಮಕೂರು, ಮಧುಗಿರಿ, ಕೋಲಾರ, ಮುಳಬಾಗಿಲು, ಬೆಂಗಳೂರು ನಗರದಲ್ಲಿ ತಿಗಳರ ಜನಸಂಖ್ಯೆ ಹೆಚ್ಚಾಗಿದೆ. ಬುಡಕಟ್ಟು ಸಂಪ್ರದಾಯಗಳನ್ನು ಹೊಂದಿರುವ ಇವರ ಮೂಲ ತಮಿಳುನಾಡು ಎಂದು ಕೆಲ ವಿದ್ವಾಂಸರು ಗುರುತಿಸಿದ್ದಾರೆ. ಆದರೆ ಕೆಲ ವಿದ್ವಾಂಸರು ಇವರು ಕನ್ನಡಿಗರು ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಮೈಸೂರು ರಾಜ್ಯದ ಆಡಳಿತ ನಡೆಸುತ್ತಿದ್ದ ಹೈದರಾಲಿಯು, ತಮಿಳುನಾಡಿನಿಂದ ಕೃಷಿ ಹಾಗೂ ತೋಟಗಾರಿಕೆಯಲ್ಲಿ ಅನುಭವ ಹೊಂದಿದ್ದ ತಿಗಳರನ್ನು ಕರೆತಂದು ಬೆಂಗಳೂರಿನಲ್ಲಿ ಲಾಲ್‌ಬಾಗ್ ಉದ್ಯಾನವನ್ನು ನಿರ್ಮಿಸಿದರು ಎಂದು ಇತಿಹಾಸ ತಿಳಿಸುತ್ತದೆ. ಬೆಂಗಳೂರಿನಲ್ಲಿ ನಡೆಯುವ ಕರಗ ಉತ್ಸವವು ತಿಗಳರ ಸಾಂಸ್ಕೃತಿಕವೈವಿಧ್ಯತೆಯನ್ನುತೋರಿಸುತ್ತದೆ. ರಾಜ್ಯದಲ್ಲಿ ತಿಗಳು ಸಮುದಾಯದವರು ಅಭಿವೃದ್ಧಿ ಹೊಂದಿದ್ದು, ಸರ್ಕಾರದ ಉನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು. ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಮಾಜಿ ಶಾಸಕ ಉಮಾಪತಿ ಸೇರಿದಂತೆ ಗಣ್ಯರು ಅಗ್ನಿಬನ್ನಿರಾಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಕಲಾವಿದೆ ರಾಜೇಶ್ವರಿ ನೇತೃತ್ವದ ಕಲಾತಂಡ ನಾಡಗೀತೆ ಹಾಗೂ ಗೀತಗಾಯನ ಪ್ರಸ್ತುತ ಪಡಿಸಿದರು. ರಂಗ ನಿರ್ದೇಶಕ ಕೆ.ಪಿ.ಎನ್.ಗಣೇಶಯ್ಯ ನಿರೂಪಿಸಿದರು. ಆಹಾರ ಇಲಾಖೆ ಸಹಾಯಕ ನಿರ್ದೇಶಕ ಮಧುಸೂಧನ್ ಸ್ವಾಗತಿಸಿದರು.

ನಗರಸಭೆ ಸದಸ್ಯ ಭಾಷಾ, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್, ಪೌರಾಯುಕ್ತೆ ಎಂ.ರೇಣುಕಾ, ಜಿಲ್ಲಾಧಿಕಾರಿಗಳ ಕಚೇರಿಯ ಸಿದ್ದೇಶ್, ಜಿ.ಪಂ. ಮಾಜಿ ಸದಸ್ಯ ಪಾಪಣ್ಣ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಯುಗಾದಿ ಸಾಹಿತ್ಯ, ನಮ್ಮ ವ್ಯಕ್ತಿತ್ವದ ಗಟ್ಟಿತನ



ಸಾಮಾಜಿಕ ಜಾಲತಾಣಗಳ ಬೆಳವಣಿಗೆಯಿಂದ ಕನ್ನಡ ತಾಯಿ ಭಾಷೆಯ ಸಾಹಿತ್ಯ ಸಮೃದ್ಧವಾಗಿ ಹರಿಯುತ್ತಿದೆ. ಅದರಲ್ಲೂ ಹಬ್ಬಗಳ ಸಂದರ್ಭದಲ್ಲಿ ರಚಿತವಾಗುವ ಶುಭಾಶಯಗಳು – ಸಂದೇಶಗಳು – ಹಿತನುಡಿಗಳು ಅತ್ಯಂತ ಅದ್ಬುತ – ಮನಮೋಹಕ – ರೋಮಾಂಚನಕಾರಿ – ಸ್ಫೂರ್ತಿದಾಯಕ......

ಮೊದಲಿಗೆ ಕೇವಲ ಕೆಲವೇ ಜನರ ಸ್ವತ್ತಾಗಿದ್ದ ಸಾಹಿತ್ಯ ಕಂಪ್ಯೂಟರ್, ಇಂಟರ್ನೆಟ್ ಮತ್ತು ಮೊಬೈಲ್ ಗಳು ಬಂದ ನಂತರ ಸಾಮಾನ್ಯ ಜನರಿಗೂ ಎಟುಕತೊಡಗಿತು. ಅಲ್ಲಿಯವರೆಗೂ ಮನದಲ್ಲೇ ಅಡಗಿದ್ದ ಭಾವನೆಗಳನ್ನು ವ್ಯಕ್ತಪಡಿಸಲು ವಿವಿಧ ಸಾಮಾಜಿಕ ಜಾಲತಾಣಗಳ ವೇದಿಕೆಗಳು ಅವಕಾಶ ಕಲ್ಪಿಸಿದವು........

ಕನ್ನಡ ತಾಯಿ ಭಾಷೆಯ ನನಗೆ, ಹಬ್ಬದ ಸಂದೇಶಗಳನ್ನು ಓದುತ್ತಿದ್ದರೆ ಭಾಷಾ ಭಂಡಾರ ವಿಶಾಲವಾಗುತ್ತಾ ಹೋಗುತ್ತಿದೆ. ಯೋಚನೆಗೆ ಹೊಸ ಹೊಸ ಅರ್ಥಗಳು ಹೊಳೆಯುತ್ತಿವೆ....

ಯುಗಾದಿ ಹಬ್ಬವೆಂದರೆ ಬೇಂದ್ರೆಯವರ ಯುಗಯುಗಾದಿ ಕಳೆದರೂ ಯುಗಾದಿ ಮರಳಿ ಬರುತಿದೆ ಎಂಬ ಕಾವ್ಯ ಮತ್ತು ಹಾಡು ಸದಾ ಮನದಲ್ಲಿ ಗುನುಗುತ್ತಿತ್ತು. ಈಗ ಅದರೊಂದಿಗೆ ಹಲವಾರು ಸಾಹಿತ್ಯ ಕೃತಿಗಳು ಆಕರ್ಷಿಸುತ್ತಿವೆ.....

ಹೊಲದಲ್ಲಿ ಬೆವರು ಸುರಿಸುತ್ತಾ ದುಡಿಯುವ ರೈತ, ಅಡುಗೆ ಮನೆಯಲ್ಲಿ ರುಚಿರುಚಿಯಾದ ಊಟ ತಯಾರಿಸುವ ಗೃಹಿಣಿ, ಸಾಫ್ಟ್ ವೇರ್ ಕಂಪನಿಯ ಕೆಲಸದ ಒತ್ತಡದಲ್ಲಿ ಕಳೆದು ಹೋಗುವ ಯುವಕ/ ಯುವತಿಯರು, ಆಟೋ/ಕಾರು/ವಾಹನ ಚಲಾಯಿಸುವ ಚಾಲಕರು, ಲಾಯರ್/ಪೋಲೀಸ್/ ಡಾಕ್ಟರ್/ಶಿಕ್ಷಕರು/ವ್ಯಾಪಾರಿಗಳು ಮುಂತಾದ ವೃತ್ತಿನಿರತರು, ಕೂಲಿ ಕಾರ್ಮಿಕರು, ಯುವ ಪ್ರೇಮಿಗಳು/ವಿರಹಿಗಳು, ನಿವೃತ್ತರು ಹೀಗೆ ಸಮಾಜದ ಎಲ್ಲಾ ವರ್ಗದ ಜನರು ಕನಿಷ್ಠ ತಮ್ಮ ಮೊಬೈಲ್ ಗಳಲ್ಲಿ ಹಬ್ಬದ ಮನೋಲ್ಲಾಸ ನೀಡುವ ಸ್ಫೂರ್ತಿದಾಯಕ ಸಂದೇಶಗಳನ್ನು ಬರೆಯುತ್ತಾರೆ ಅಥವಾ ಓದುತ್ತಾರೆ. ಇದು ಭಾಷೆಯ ಬೆಳವಣಿಗೆಯ ದೃಷ್ಟಿಯಿಂದ ಅತ್ಯಂತ ಮಹತ್ವದ ಹಂತ ಎಂದು ಗುರುತಿಸಬಹುದು.......

ಈ ಯುಗಾದಿ ಹಬ್ಬ ಕೇವಲ ಸಾಹಿತ್ಯದ ಬೆಳವಣಿಗೆಗೆ ಮಾತ್ರವಲ್ಲದೆ, ನಶಿಸುತ್ತಿರುವ ಮಾನವೀಯ ಮೌಲ್ಯಗಳ/ಸಂಬಂಧಗಳ ಪುನರುಜ್ಜೀವನಕ್ಕೆ ವಸಂತ ಋತುವಿನಂತೆ ಚಿಗುರುವ ಚೈತ್ರಕಾಲವಾಗಲಿ ಎಂದು ಮನದುಂಬಿ ಆಶಿಸುತ್ತಾ.....

ಮುಂದಿನ ವರ್ಷದ ಹಬ್ಬದೊಳಗಾಗಿ ನಮ್ಮಲ್ಲಿ ಬದಲಾವಣೆಯ ಹೊಸಗಾಳಿ ಬೀಸಿ ನಮ್ಮ ಜೀವನಮಟ್ಟ ಉತ್ತಮವಾಗಲಿ ಎಂದು ನಿರೀಕ್ಷಿಸುತ್ತಾ...

**********

ಹಾಗೆಯೇ....

ಎಲ್ಲರನ್ನೂ ಎಲ್ಲಾ ಕಾಲಕ್ಕೂ ಎಲ್ಲಾ ಸಂದರ್ಭದಲ್ಲೂ ವಂಚಿಸಲು ಸಾಧ್ಯವಿಲ್ಲ ಎಂಬ ಇಂಗ್ಲೀಷ್ ನಾಣ್ಣುಡಿ ಇದೆ....

ದೀರ್ಘಕಾಲದ ಅನುಭವದಲ್ಲಿ ಇದು ಸತ್ಯ ಎನಿಸುತ್ತದೆ.

ತಾತ್ಕಾಲಿಕವಾಗಿ ನಾವು ನಮ್ಮ ಮುಖವಾಡಗಳಲ್ಲಿ ಯಶಸ್ಸು ಗಳಿಸಬಹುದು. ಆದರೆ ನಿರಂತರವಾಗಿ ಮತ್ತು ಅದೇ ಗುಣಮಟ್ಟ ಬಹಳ ಕಾಲ ಉಳಿಸಿಕೊಳ್ಳಲಾಗದೆ ಕ್ರಮೇಣ ಯಾವುದೋ ಒಂದು ಸಂದರ್ಭದಲ್ಲಿ ಅಗ್ನಿ ಪರೀಕ್ಷೆ ಎದುರಾಗಿ ನಮ್ಮ ನಿಜ ವ್ಯಕ್ತಿತ್ವ ಬಯಲಾಗುತ್ತದೆ.....

ಇದು ಎಲ್ಲಾ ಕ್ಷೇತ್ರಗಳಿಗು ಮತ್ತು ಎಲ್ಲಾ ಸಂಬಂಧಗಳಿಗೂ ಅನ್ವಯಿಸುತ್ತದೆ.....

ಕ್ರೀಡೆ ಸಾಹಿತ್ಯ ಸಂಗೀತ ಕಲೆ ವಿಜ್ಞಾನ ರಾಜಕೀಯ ಸಂಘಟನೆ ಮತ್ಯಾವುದೇ ವಿಭಾಗವಾಗಿರಲಿ ನಮ್ಮ ವ್ಯಕ್ತಿತ್ವದಲ್ಲಿ ನಿಜ ಸಾಮರ್ಥ್ಯ ಇಲ್ಲದಿದ್ದಲ್ಲಿ ನಾವು ಕ್ರಮೇಣ ಕುಸಿಯತೊಡಗುತ್ತೇವೆ. ತಾತ್ಕಾಲಿಕ ಯಶಸ್ಸು ಮರೆಯಾಗುತ್ತದೆ. ಆಗ ನಾವು ಭ್ರಮನಿರಸನ ಹೊಂದಿ ಅಸಹಿಷ್ಣತೆ ಅಥವಾ ಖಿನ್ನತೆಗೆ ಒಳಗಾಗುತ್ತೇವೆ.....









ಉದಾಹರಣೆಗೆ,

ನೀವು ಯಾವುದೇ ಪ್ರಕಾರದ ಬರಹಗಾರರು ಆಗಿರಬಹುದು. ನಿಮ್ಮ ಒಳಗಿನ ವ್ಯಕ್ತಿತ್ವದ ಸಹಜ ಭಾವನೆಗಳ ಅನಾವರಣ ನಿಮ್ಮದಾಗಿರದೆ ಕೇವಲ ಅಕ್ಷರ ಜ್ಞಾನದ ಆಧಾರದಲ್ಲಿ ಪದಗಳ ಚಾಕಚಕ್ಯತೆಯ ಮೇಲೆ ಸಾಹಿತ್ಯ ರಚಿಸುತ್ತಿದ್ದರೆ ಪ್ರಾರಂಭದಲ್ಲಿ ಅದು ಒಂದಷ್ಟು ಯಶಸ್ಸು ತಂದುಕೊಡಬಹುದಾದರು ದೀರ್ಘಕಾಲದಲ್ಲಿ ಅದು ಜೊಳ್ಳು ಎಂದು ನಿಜವಾದ ಕಸುಬುದಾರರಿಗೆ ಅರ್ಥವಾಗುತ್ತದೆ......

ಚಾಲಕರೇ ಇರಬಹುದು, ಸಮಾಜ ಸುಧಾರಕರೇ ಇರಬಹುದು, ಮೆಕ್ಯಾನಿಕ್ ಆಗಿರಬಹುದು, ಅದರ ಬಗ್ಗೆ ಸಂಪೂರ್ಣ ನಿಯಂತ್ರಣ ಇದ್ದರೆ ಮಾತ್ರ ಯಶಸ್ಸು ಗಳಿಸಲು ಸಾಧ್ಯ. ವಾಹನ ಚಲಾಯಿಸಿದ ಮಾತ್ರಕ್ಕೆ ಅಥವಾ ಸಂಗೀತದ ಒಂದು ವಾದ್ಯ ನುಡಿಸಿದ ಮಾತ್ರಕ್ಕೆ ನಾನು ಅದರಲ್ಲಿ ಪಂಡಿತ ಎಂದು ಭಾವಿಸಲು ಸಾಧ್ಯವಿಲ್ಲ......

ಹಾಗೆಯೇ,

ಸಂಬಂಧಗಳಲ್ಲಿಯೂ ಸಹ ತೋರಿಕೆಯ ಮನೋಭಾವ ಬಹಳ ದಿನ ಕಾಪಾಡಿಕೊಳ್ಳಲು ಸಾಧ್ಯವಾಗುವುದಿಲ್ಲ. ಪ್ರೀತಿಯೋ, ಸ್ನೇಹವೋ, ಭಕ್ತಿಯೋ, ವಿನಯವೋ, ಧೈರ್ಯವೋ ಅದು ಆಳವಾಗಿ ಸ್ವಾಭಾವಿಕವಾಗಿ ನಮ್ಮ ವ್ಯಕ್ತಿತ್ವದಲ್ಲಿ ಅಂತರ್ಗತವಾಗಿದ್ದಾಗ ಮಾತ್ರ ಅದು ಬೇರೆಯವರಿಗೆ ಅರ್ಥವಾಗುತ್ತದೆ ಮತ್ತು ದೀರ್ಘಕಾಲ ಉಳಿಯುತ್ತದೆ. ಇಲ್ಲದಿದ್ದರೆ ಚಿಕ್ಕ ಮಗುವಿಗೂ ನಮ್ಮ ಕಪಟತನ ತಿಳಿದುಬಿಡುತ್ತದೆ......

ಗೆಳೆಯ ಗೆಳತಿಯರೆ,

ನಮ್ಮ ಬರಹಗಳಲ್ಲಿ ನಿಜವಾದ ಸಾಮರ್ಥ್ಯ ಇದ್ದರೆ ಇಂದಲ್ಲಾ ನಾಳೆ ಅದು ಓದುಗರ ಮನಸ್ಸಿಗೆ ತಲುಪುತ್ತದೆ. ಇಲ್ಲದಿದ್ದರೆ ಹಾಗೆ ಮರೆಯಾಗುತ್ತದೆ......

ಈ ಕ್ಷಣದ ಹೊಗಳಿಗೆ ಅಥವಾ ತೆಗಳಿಕೆ ನಮ್ಮ ಒಟ್ಟು ಸಾಮರ್ಥ್ಯ ಅಥವಾ ಅಸಾಮರ್ಥ್ಯ ನಿರ್ಧರಿಸುವುದಿಲ್ಲ.....

ಈ ಕಾಲಘಟ್ಟದಲ್ಲಿ ಪಂಥಗಳ ಬಲೆಯೊಳಗೆ ಬಂಧಿಯಾಗಿರುವ ಮನಸ್ಸುಗಳ ನಡುವೆ, ಅಪರಿಚಿತ ಮತ್ತು ಪರೋಕ್ಷ ಗೆಳೆತನ ಇನ್ನೂ ಗಟ್ಟಿಯಾಗಿ ಬೇರುಬಿಟ್ಟಿರದ ಸಮಯದಲ್ಲಿ ಇಲ್ಲಿನ ಟೀಕೆ ಮತ್ತು ಪ್ರೋತ್ಸಾಹ ಎರಡನ್ನೂ ಸಮಚಿತ್ತದಿಂದ ಸ್ವೀಕರಿಸಿ. ಅಹಂ ಅಥವಾ ನಿರ್ಲಕ್ಷ್ಯ ಎರಡೂ ಬೇಡ........

ಕಾಲನ ಪರೀಕ್ಷೆಯಲ್ಲಿ ನಮ್ಮ ಶಕ್ತಿ ಸಾಮರ್ಥ್ಯ ನಮ್ಮ ವ್ಯಕ್ತಿತ್ವದ ಭಾಗವೇ ಆಗಿದ್ದರೆ ಯಶಸ್ಸು ನಮ್ಮದಾಗುತ್ತದೆ. ಒಂದು ವೇಳೆ ವಿಫಲವಾದರೆ ಅದು ಕೂಡ ನಮ್ಮ ಸಾಮರ್ಥ್ಯದ ಇತಿಮಿತಿ ಎಂದು ಭಾವಿಸೋಣ. ಸಾಧ್ಯವಾದಷ್ಟು ಸ್ಥಿತಪ್ರಜ್ಞ ಮನೋಭಾವ ಬೆಳೆಸಿಕೊಳ್ಳೋಣ........

ಈಗಿನ ವೇಗದ ಮತ್ತು ಸಂಪರ್ಕ ಕ್ರಾಂತಿಯ ಸಂದರ್ಭದಲ್ಲಿ ನಮ್ಮ ನೆಮ್ಮದಿಗಾಗಿ ಇದು ಅತ್ಯಂತ ಅವಶ್ಯ. ನೀವು ಆತುರಕ್ಕೆ ಬಿದ್ದರೆ ಈ ಸೋಷಿಯಲ್ ಮೀಡಿಯಾ ಬಹುಬೇಗ ನಿಮ್ಮನ್ನು ನಿರಾಸೆಗೆ ತಳ್ಳಿ ನೀವು ಭ್ರಮನಿರಸನ ಆಗುವಂತೆ ಮಾಡುತ್ತದೆ.....

ಆದ್ದರಿಂದ ಇದೊಂದು ಅದ್ಬುತ ಮಾಯಾ ಜಾಲ. ನಿಮ್ಮ ಸಾಮರ್ಥ್ಯದ ಬಗ್ಗೆ ನಿಮಗೆ ವಿಶ್ವಾಸವಿದ್ದರೆ ನಿಧಾನವಾಗಿ ಮತ್ತು ನಿರಂತರವಾಗಿ ಇದರ ಉಪಯೋಗ ಪಡೆಯಬಹುದು.....

ದ್ವೇಷಕಾರುವ, ಅಸೂಯೆಪಡುವ, ಉಡಾಫೆ ಅಭಿಪ್ರಾಯ ವ್ಯಕ್ತಪಡಿಸಿ ಮಜಾ ನೋಡುವ, ನಿಮ್ಮನ್ನು ಕೆಣಕುವ, ಇಲ್ಲದ ತಪ್ಪುಗಳನ್ನು ಹುಡುಕುವ, ಸರಿಯನ್ನು ತಪ್ಪು ಮಾಡುವ ವ್ಯಕ್ತಿಗಳು ಅಥವಾ ಗುಂಪುಗಳ ಅನೇಕ ಗುಣಗಳನ್ನು ಆದಷ್ಟೂ ಗುರುತಿಸಿ ಅವರಿಂದ ದೂರ ಇರಲು ಪ್ರಯತ್ನಿಸಿ......

ಕೇವಲ ಬರಹಗಳ, ಅಭಿಪ್ರಾಯಗಳ, ಪದಗಳ ಆಧಾರದ ಮೇಲೆ ಯಾರ ತನವನ್ನೂ ನಿರ್ಧರಿಸಬೇಡಿ. ಅವರ ಇಡೀ ವ್ಯಕ್ತಿತ್ವ ನಿಮಗೆ ಪರಿಚಯವಾಗಿ ಅದು ನಿಮಗೆ ಇಷ್ಟವಾದರೆ ಮಾತ್ರ ಗೆಳೆತನದ ಆಳಕ್ಕೆ ಹೋಗಿ.....

ಇದು ಸೂಕ್ಷ್ಮ ಮನಸ್ಸಿನ ಗೆಳೆಯ ಗೆಳೆತಿಯರಿಗೆ ಮಾತ್ರ. ಭಂಡ ಸ್ವಭಾವದರು ಎಲ್ಲಿದ್ದರೂ – ಹೇಗಿದ್ದರೂ ತಮ್ಮ ಅಸ್ತಿತ್ವ ಉಳಿಸಿಕೊಳ್ಳುತ್ತಾರೆ....

ಧನ್ಯವಾದಗಳು......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ದಿನವಹಿ ಮಾರುಕಟ್ಟೆ, ವಾರಸಂತೆ ಹರಾಜು ಪ್ರಕ್ರಿಯೆ ಸುಖಾಂತ

**ಚಳ್ಳಕೆರೆ:** ನಗರಸಭೆಯ 2025–26ನೇ ಸಾಲಿನ ದಿನವಹಿ ಮಾರುಕಟ್ಟೆ, ವಾರದಸಂತೆ ಬರಹಿರಂಗ ಹರಾಜನ್ನು ನಗರಸಭೆ ಸಭಾಂಗಣದಲ್ಲಿ ಶುಕ್ರವಾರ ನಡೆಸಲಾಯಿತು. ನಗರಸಭೆ ಅಧ್ಯಕ್ಷೆ ಆರ್.ಮಂಜುಳಾಪ್ರಸನ್ನಕುಮಾರ್, ಉಪಾಧ್ಯಕ್ಷೆ ಸುಮಭರಮಣ್ಣ, ಸಾರ್ವಜನಿಕರು, ಚುನಾಯಿತ ಸದಸ್ಯರು ಹರಾಜಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು. ಪ್ರಾರಂಭದಲ್ಲಿ ಪೌರಾಯುಕ್ತ ಎಚ್.ಜಿ.ಜಗರೆಡ್ಡಿ (2025)ಏ.1ರಿಂದ ಡಿ.31(2026)ರ ಅವಧಿಗೆ ಹರಾಜು ಪ್ರಕ್ರಿಯೆ ನಡೆಯಲಿದೆ. ಹರಾಜು ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವವರು ನಿಗದಿತ ಠೇವಣಿ ಪಾವತಿಸಿದ ನಂತರವೇ ಹರಾಜುನಲ್ಲಿ ಭಾಗವಹಿಸಬಹುದಾಗಿದೆ. ನಿಬಂಧನೆಗಳು ಅನ್ವಯವಾಗಲಿವೆ ಎಂದರು. ಇದೇ ಸಂದರ್ಭದಲ್ಲಿ ದಿನವಹಿ ಮಾರುಕಟ್ಟೆ ಹರಾಜನ್ನು ಸುರೇಶ್ ಎಂಬುವವರು 5.50 ಲಕ್ಷಕ್ಕೆ, ವಾರದ ಸಂತೆ ಗೋವಿಂದರಾಜು ಎಂಬುವವರು 10.20ಲಕ್ಷಕ್ಕೆ ಪಡೆದುಕೊಂಡರು. ವಿಶೇಷವೆಂದರೆ ಪ್ರತಿಯೊಂದು ಹರಾಜಿಗೂ ಕೇವಲ ಮೂವರು ಬಿಡ್‌ದಾರರು ಉಪಸ್ಥಿತರಿದ್ದರು.

**ಶಾಸಕರಿಗೆ ಪೌರನೌಕರರ ಸನ್ಮಾನ** :ನಗರಸಭೆ ಅಧ್ಯಕ್ಷ ಪದಗ್ರಹಣ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಶಾಸಕ ಟಿ.ರಘುಮೂರ್ತಿಯವರನ್ನು ಪೌರನೌಕರರ ಸಂಘದ ವತಿಯಿಂದ ಅಭಿನಂದಿಸಲಾಯಿತು. ಅಧ್ಯಕ್ಷ ಈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಎಚ್.ಟಿ.ಮಹಲಿಂಗಪ್ಪ, ಪ್ರಧಾನ ಕಾರ್ಯದರ್ಶಿ ಟಿ.ಎನ್.ವಿಶ್ವನಾಥ, ಕಾನೂನು ಸಲಹೆಗಾರ ಎಚ್.ಟಿ.ಲಿಂಗರಾಜು ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆಯ ನಗರಸಭೆಗೆ ಭೇಟಿ ನೀಡಿದ್ದ ಶಾಸಕ ಟಿ.ರಘುಮೂರ್ತಿ ಯವರನ್ನು ಪೌರನೌಕರರ ಸಂಘದ ವತಿಯಿಂದ ಸನ್ಮಾನಿಸಲಾಯಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T